Volume : 9 | Issue : 163 | September : 13 : 2026 : Sunday
ಸಂಪುಟ : 9 | ಸಂಚಿಕೆ : 163 | ಸೆಪ್ಟಂಬರ್ : 13 : 2026 : ಭಾನುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481



ಟಾಲಿವುಡ್‌ನಲ್ಲೂ ಮಿಂಚುತ್ತಿರುವ ಕನ್ನಡತಿ ಆಶಿಕಾ ರಂಗನಾಥ್; ನಾಗಾರ್ಜುನ, ಚಿರಂಜೀವಿ ಸೇರಿದಂತೆ ಸ್ಟಾರ್ ನಟರ ಚಿತ್ರಗಳಲ್ಲಿ ಅವಕಾಶ ಪಡೆದು ಪರಭಾಷೆಯಲ್ಲೂ ಬೇಡಿಕೆ ಹೆಚ್ಚಿಸಿಕೊಂಡಿರುವ ನಟಿ.

ವಿಕ್ರಮ ವಾಹಿನಿ ಕನ್ನಡ ದಿನಪತ್ರಿಕೆಯ ಎಲ್ಲ ಓದುಗರಿಗೂ ಗೌರಿ–ಗಣೇಶ ಹಬ್ಬದ ಹಾರ್ದಿಕ ಶುಭಾಷಯಗಳು. ಸಂಕಷ್ಟಹರ ವಿನಾಯಕನು ಎಲ್ಲರ ಬದುಕಿನ ಸಂಕಷ್ಟವನ್ನು ದೂರಾಗಿಸಿ ಸುಖ, ಸಮೃದ್ಧಿ, ಶಾಂತಿ ನೀಡಲೆಂದು ಹಾರೈಸುತ್ತೇವೆ.– ಸಂಪಾದಕ



ಒಂದೇ ದಿನ ಶ್ರೀಸ್ವರ್ಣಗೌರಿ ವ್ರತ ಹಾಗೂ ಶ್ರೀವರಸಿದ್ಧಿ ವಿನಾಯಕ ವ್ರತ

ಪುಟ 2



## ■ ಸುದ್ದಿ ಚುಟುಕು

### 503 ಬಾಲಕಾರ್ಮಿಕರ ರಕ್ಷಣೆ

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ಬೆನ್ನಲ್ಲೇ ಬಾಲಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಂಡವರ ವಿರುದ್ಧ ನಗರ ಪೊಲೀಸರು ವಿಶೇಷ ಕಾರ್ಯಾಚರಣೆ ನಡೆಸಿದ್ದು, 5,897 ಸ್ಥಳಗಳಲ್ಲಿ ಪರಿಶೀಲನೆ ನಡೆಸಿ 503 ಬಾಲಕಾರ್ಮಿಕರನ್ನು ರಕ್ಷಿಸಿದ್ದಾರೆ.

ನಗರದ ಹೋಟೆಲ್, ಅಂಗಡಿ, ವಾಣಿಜ್ಯ ಮಳಿಗೆ, ಎಪಿಎಂಸಿ ಮಾರುಕಟ್ಟೆ, ಶೋರೂಮ್ ಹಾಗೂ ಇ–ಕಾಮರ್ಸ್ ದಾಸ್ತಾನು ಕೇಂದ್ರ ಸೇರಿದಂತೆ ವಿವಿಧೆಡೆ ಕಾರ್ಯಾಚರಣೆ ನಡೆಸಲಾಗಿದೆ. ಬಾಲಕಾರ್ಮಿಕರ ನಿಷೇಧ ಕಾಯ್ದೆ ಹಾಗೂ ಬಾಲ ನ್ಯಾಯ ಕಾಯ್ದೆಯಡಿ 18 ಪ್ರಕರಣಗಳನ್ನು ದಾಖಲಿಸಲಾಗಿದೆ.

ಸಿಸಿಬಿ ತಂಡ 420 ಸ್ಥಳಗಳಲ್ಲಿ ಪರಿಶೀಲನೆ ನಡೆಸಿ 45 ಮಕ್ಕಳನ್ನು ರಕ್ಷಿಸಿದ್ದು, 9 ಪ್ರಕರಣ ದಾಖಲಿಸಿದೆ. ಪೂರ್ವ ವಿಭಾಗದಲ್ಲಿ 71, ಪಶ್ಚಿಮದಲ್ಲಿ 84, ಉತ್ತರದಲ್ಲಿ 62 ಹಾಗೂ ಕೇಂದ್ರ ವಿಭಾಗದಲ್ಲಿ 63 ಮಕ್ಕಳನ್ನು ರಕ್ಷಿಸಲಾಗಿದೆ. ಯಶವಂತಪುರ ಎಪಿಎಂಸಿ ಮಾರುಕಟ್ಟೆಗೆ ಭೇಟಿ ನೀಡಿದ್ದ ವೇಳೆ ಬಾಲಕಾರ್ಮಿಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪೊಲೀಸರಿಗೆ ಸೂಚಿಸಿದ್ದರು.

## ಪಾರ್ಶ್ವವಾಯು ಪೀಡಿತ ಪತಿ ಹತ್ಯೆ

● ವಿಕ್ರಮ ವಾಹಿನಿ । ಬೆಂಗಳೂರು

ಪಾರ್ಶ್ವವಾಯುವಿನಿಂದ ಹಾಸಿಗೆ ಹಿಡಿದಿದ್ದ ಪತಿಯನ್ನು ಪತ್ನಿ ತನ್ನ ತಾಯಿ ಹಾಗೂ ಪ್ರಿಯಕರನೊಂದಿಗೆ ಸೇರಿ ಹತ್ಯೆಗೈದು, ಹೃದಯಾಘಾತದಿಂದ ಮೃತಪಟ್ಟಿರುವುದಾಗಿ ಬಿಂಬಿಸಿದ ಘಟನೆ ಆವಲಹಳ್ಳಿ ಠಾಣೆ ವ್ಯಾಪ್ತಿಯ ಕಿತ್ತಗನೂರಿನಲ್ಲಿ ನಡೆದಿದೆ.

ಮೃತರನ್ನು 40 ವರ್ಷದ ಮುಬಾರಕ್ ಎಂದು ಗುರುತಿಸಲಾಗಿದ್ದು, ಪತ್ನಿ ಶಹೀನಾ ಬಾನು, ಆಕೆಯ ತಾಯಿ ಹಸೀನಾ ಬಾನು ಹಾಗೂ ನಹೀಮ್ ಉದ್ದೀನ್ ಖುರೇಶಿಯನ್ನು ಪೊಲೀಸರು ಬಂಧಿಸಿದ್ದಾರೆ. ಎರಡು ವರ್ಷಗಳಿಂದ ಪಾರ್ಶ್ವವಾಯುವಿನಿಂದ ಹಾಸಿಗೆ ಹಿಡಿದಿದ್ದ ಮುಬಾರಕ್ ಅವರ ಆರೈಕೆ ಮಾಡುತ್ತಿದ್ದ ಶಹೀನಾಗೆ, ಪುತ್ರಿಯನ್ನು ಗುಣಪಡಿಸುವುದಾಗಿ ಮನೆಗೆ ಬರುತ್ತಿದ್ದ ನಹೀಮ್‌ನೊಂದಿಗೆ ಆತ್ಮೀಯತೆ ಬೆಳೆದಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

ಸೆ.9ರ ರಾತ್ರಿ ಮೂವರು ಸೇರಿ ಮುಬಾರಕ್ ಮೇಲೆ ಹಲ್ಲೆ ನಡೆಸಿ ಉಸಿರುಗಟ್ಟಿಸಿ ಹತ್ಯೆಗೈದು, ಬಳಿಕ ಹೃದಯಾಘಾತದಿಂದ ಮೃತಪಟ್ಟಿರುವುದಾಗಿ ನಾಟಕವಾಡಿದ್ದರು ಎನ್ನಲಾಗಿದೆ. ಮರಣೋತ್ತರ ಪರೀಕ್ಷೆಯಲ್ಲಿ ಕೆನ್ನೆ, ಮೂಗು, ಕುತ್ತಿಗೆ ಹಾಗೂ ಖಾಸಗಿ ಭಾಗಗಳಲ್ಲಿ ಗಾಯದ ಗುರುತುಗಳು ಪತ್ತೆಯಾಗಿದ್ದು, ಉಸಿರುಗಟ್ಟಿಸಿ ಹತ್ಯೆ ಮಾಡಿರುವುದು ಬೆಳಕಿಗೆ ಬಂದಿದೆ. ವಿಚಾರಣೆ ವೇಳೆ ಆರೋಪಿಗಳು ಕೃತ್ಯ ಒಪ್ಪಿಕೊಂಡಿದ್ದು, ಮೂವರನ್ನೂ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

## ವಿಮಾ ಪರಿಹಾರಕ್ಕಾಗಿ ವಂಚನೆ ಶಂಕೆ

● ವಿಕ್ರಮ ವಾಹಿನಿ । ಬೆಂಗಳೂರು

ವಿಮಾ ಪರಿಹಾರ ಪಡೆಯಲು 16 ವರ್ಷಗಳ ಹಿಂದಿನ ಅಪಘಾತದ ಸನ್ನಿವೇಶವನ್ನು ತಿರುಚಿ ವಂಚನೆ ನಡೆಸಿರುವ ಸಾಧ್ಯತೆಯಿದೆ ಎಂದು ಅಭಿಪ್ರಾಯಪಟ್ಟಿರುವ ಹೈಕೋರ್ಟ್, ಪ್ರಕರಣದ ಮರುತನಿಖೆಗೆ ಎಸ್ಐಟಿ ರಚಿಸುವಂತೆ ಆದೇಶಿಸಿದೆ.

ಗಿರಿಧರ ನೀಲಕಂಠ ಪೈ ಸಲ್ಲಿಸಿದ್ದ ಮೇಲ್ಮನವಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಕೆ.ಬಿ. ಗೀತಾ ಅವರಿದ್ದ ಧಾರವಾಡ ಪೀಠ, ಪಶ್ಚಿಮ ವಲಯದ ಐಜಿಪಿ ನೇತೃತ್ವದಲ್ಲಿ ಎಸ್ಐಟಿ ರಚಿಸಿ ಮೂರು ತಿಂಗಳಲ್ಲಿ ವರದಿ ಸಲ್ಲಿಸುವಂತೆ ಸೂಚಿಸಿದೆ. ಮೇಲ್ಮನವಿಯನ್ನು ವಜಾಗೊಳಿಸಿ ಅರ್ಜಿದಾರರಿಗೆ ರೂ.10 ಸಾವಿರ ದಂಡ ವಿಧಿಸಿದೆ.

2010ರ ಸೆ.15ರಂದು ಶಿರೂರು ಬಳಿ ನಡೆದ ಅಪಘಾತದಲ್ಲಿ ತಾವು ಹಿಂಬದಿ ಸವಾರರಾಗಿದ್ದಾಗಿ ಗಿರಿಧರ ಹೇಳಿ ರೂ.15 ಲಕ್ಷ ಪರಿಹಾರ ಕೋರಿದ್ದರು. ಆದರೆ, ಅವರಿಗೆ ಚಾಲನಾ ಪರವಾನಗಿ ಇರಲಿಲ್ಲ. ಲೈಸೆನ್ಸ್ ಹೊಂದಿದ್ದ ನಾಗಪ್ಪನನ್ನು ಸವಾರ ಎಂದು ಬಿಂಬಿಸಿರುವ ಸಾಧ್ಯತೆಯ ಬಗ್ಗೆಯೂ ನ್ಯಾಯಾಲಯ ಅನುಮಾನ ವ್ಯಕ್ತಪಡಿಸಿದೆ.

ಕುಮಟಾ ಮೋಟಾರು ಅಪಘಾತ ಪರಿಹಾರ ನ್ಯಾಯಮಂಡಳಿ 2016ರ ನ.28ರಂದು ಅರ್ಜಿ ತಿರಸ್ಕರಿಸಿತ್ತು. ಇದನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲಾಗಿತ್ತು. ಸಮಗ್ರ ತನಿಖೆ ನಡೆಸುವಂತೆ ಎಸ್ಐಟಿಗೆ ಸೂಚಿಸಿರುವ ನ್ಯಾಯಪೀಠ, ದಂಡದ ಮೊತ್ತವನ್ನು ಧಾರವಾಡ ಹೈಕೋರ್ಟ್ ಅಡ್ವೊಕೇಟ್ಸ್ ಲೈಬ್ರರಿ ಫಂಡ್‌ಗೆ ಜಮಾ ಮಾಡುವಂತೆ ನಿರ್ದೇಶಿಸಿದೆ.

# ಕಲ್ಲಿದ್ದಲು ಕೊರತೆ: 63 ಉಷ್ಣ ವಿದ್ಯುತ್ ಘಟಕಗಳಿಗೆ ಸಂಕಷ್ಟ

## ದೇಶೀಯ ಕಲ್ಲಿದ್ದಲು ಆಧಾರಿತ ಘಟಕಗಳಲ್ಲಿ ದಾಸ್ತಾನು ತೀವ್ರ ಇಳಿಕೆ; ವಿದ್ಯುತ್ ಉತ್ಪಾದನೆ ಕುಸಿತದ ಆತಂಕ

● ವಿಕ್ರಮ ವಾಹಿನಿ । ನವದೆಹಲಿ

ದೇಶದ ಉಷ್ಣ ವಿದ್ಯುತ್ ವಲಯ ಕಲ್ಲಿದ್ದಲು ಕೊರತೆಯಿಂದ ತೀವ್ರ ಒತ್ತಡಕ್ಕೆ ಸಿಲುಕಿದ್ದು, 63 ವಿದ್ಯುತ್ ಘಟಕಗಳಲ್ಲಿ ಕಲ್ಲಿದ್ದಲು ದಾಸ್ತಾನು ಅಪಾಯಕಾರಿ ಮಟ್ಟಕ್ಕೆ ಕುಸಿದಿದೆ. ಇದರಿಂದ ಮುಂದಿನ ದಿನಗಳಲ್ಲಿ ವಿದ್ಯುತ್ ಉತ್ಪಾದನೆ ಮೇಲೆ ಪರಿಣಾಮ ಬೀರುವ ಆತಂಕ ಎದುರಾಗಿದೆ.

ಕೇಂದ್ರೀಯ ವಿದ್ಯುತ್ ಪ್ರಾಧಿಕಾರದ (ಸಿಇಎ) ಸೆ.11ರ ದೈನಂದಿನ ವರದಿ ಪ್ರಕಾರ, ದೇಶೀಯ ಕಲ್ಲಿದ್ದಲು ಬಳಸುವ 57 ಘಟಕಗಳು, ಆಮದು ಕಲ್ಲಿದ್ದಲು ಬಳಸುವ 5 ಘಟಕಗಳು ಹಾಗೂ ಕಲ್ಲಿದ್ದಲು ಸಂಸ್ಕರಣಾ ತ್ಯಾಜ್ಯ ಬಳಸುವ ಒಂದು ಘಟಕದಲ್ಲಿ ದಾಸ್ತಾನು ತೀವ್ರ ಕಡಿಮೆಯಾಗಿದೆ. ಜುಲೈ ಅಂತ್ಯದಲ್ಲಿ ಇಂತಹ ಘಟಕಗಳ ಸಂಖ್ಯೆ 31 ಇದ್ದರೆ, ಆಗಸ್ಟ್ ಅಂತ್ಯಕ್ಕೆ 45ಕ್ಕೆ ಏರಿತ್ತು.

ದೇಶೀಯ ಕಲ್ಲಿದ್ದಲು ಆಧಾರಿತ ಘಟಕಗಳಿಗೆ ದಿನಕ್ಕೆ 29.12 ಲಕ್ಷ ಟನ್ ಕಲ್ಲಿದ್ದಲು ಅಗತ್ಯವಿದ್ದು, ಪ್ರಸ್ತುತ 220.96 ಲಕ್ಷ ಟನ್ ದಾಸ್ತಾನು ಮಾತ್ರವಿದೆ. ಇದು ಸುಮಾರು ಒಂದು ವಾರಕ್ಕೆ ಸಾಕಾಗುವಷ್ಟು ಮಾತ್ರವಾಗಿದೆ.

ಗಣಿ ಪ್ರದೇಶಗಳಲ್ಲಿ ಭಾರಿ ಮಳೆ ಹಾಗೂ ಕಲ್ಲಿದ್ದಲು ಸಾಗಣೆಯಲ್ಲಿನ ವ್ಯತ್ಯಯದಿಂದ ಪೂರೈಕೆಗೆ ತೊಂದರೆಯಾಗಿದೆ. ಪರಿಸ್ಥಿತಿ ಸುಧಾರಿಸಲು ಕಲ್ಲಿದ್ದಲು ಲೋಡಿಂಗ್ ವೇಗ ಹೆಚ್ಚಿಸುವಂತೆ ಕೋಲ್ ಇಂಡಿಯಾಗೆ ಕೇಂದ್ರ ಕಲ್ಲಿದ್ದಲು ಸಚಿವಾಲಯ ಸೂಚಿಸಿದೆ. ಗಣಿ ಪ್ರದೇಶಗಳಲ್ಲಿ ಸುಮಾರು 7.6 ಕೋಟಿ ಟನ್ ಕಲ್ಲಿದ್ದಲು ಸಂಗ್ರಹವಿದ್ದರೂ, ಮಳೆಯಿಂದ ರೈಲು ಸಂಚಾರ ಹಾಗೂ ಅನ್‌ಲೋಡಿಂಗ್ ಪ್ರಕ್ರಿಯೆ ವಿಳಂಬವಾಗುತ್ತಿದೆ.

ಇದೇ ವೇಳೆ, ದೇಶದ ಹಲವು ಭಾಗಗಳಲ್ಲಿ ಉಷ್ಣ ವಾತಾವರಣ ಮುಂದುವರಿದಿರುವುದರಿಂದ ವಿದ್ಯುತ್ ಬೇಡಿಕೆ ಹೆಚ್ಚಾಗಿದೆ. ಗರಿಷ್ಠ ಬೇಡಿಕೆ 267 ಗಿಗಾವ್ಯಾಟ್‌ಗೆ ತಲುಪಿದ್ದು, ಮೇ 21ರಂದು ದಾಖಲಾಗಿದ್ದ 270.70 ಗಿಗಾವ್ಯಾಟ್‌ನ ಸಾರ್ವಕಾಲಿಕ ಗರಿಷ್ಠಕ್ಕೆ ಸಮೀಪಿಸಿದೆ.

ನವೀಕರಿಸಬಹುದಾದ ಇಂಧನ ಸಾಮರ್ಥ್ಯ ಹೆಚ್ಚಿದ್ದರೂ, ಸೀಮಿತ ಬ್ಯಾಟರಿ ಸಂಗ್ರಹಣೆಯಿಂದ ರಾತ್ರಿ ವೇಳೆಯ ಬೇಡಿಕೆಯನ್ನು ಪೂರೈಸಲು ಉಷ್ಣ ವಿದ್ಯುತ್ ಸ್ಥಾವರಗಳ ಮೇಲೆಯೇ ಹೆಚ್ಚಿನ ಅವಲಂಬನೆ ಮುಂದುವರಿದಿದೆ.



**ಪ್ರಮುಖ ಅಂಶಗಳು**

- 63 ಘಟಕಗಳಿಗೆ ಕಲ್ಲಿದ್ದಲು ಕೊರತೆ
- 57 ದೇಶೀಯ ಘಟಕಗಳಲ್ಲಿ ದಾಸ್ತಾನು ಇಳಿಕೆ
- ಒಂದು ವಾರಕ್ಕಷ್ಟೇ ಕಲ್ಲಿದ್ದಲು ಬಾಕಿ
- ಭಾರಿ ಮಳೆಯಿಂದ ಪೂರೈಕೆಗೆ ಅಡ್ಡಿ
- ವಿದ್ಯುತ್ ಬೇಡಿಕೆ ನಿರಂತರ ಏರಿಕೆ ಗರಿಷ್ಠ ಬೇಡಿಕೆ 267 ಗಿಗಾವ್ಯಾಟ್
- ರಾತ್ರಿ ಬೇಡಿಕೆಗೆ ಉಷ್ಣ ವಿದ್ಯುತ್ ಅವಲಂಬನೆ

**ದೇಶದ 63 ಉಷ್ಣ ವಿದ್ಯುತ್ ಘಟಕಗಳಲ್ಲಿ ಕಲ್ಲಿದ್ದಲು ದಾಸ್ತಾನು ಅಪಾಯಕಾರಿ ಮಟ್ಟಕ್ಕೆ ಕುಸಿದಿದ್ದು, ಮಳೆ ಹಾಗೂ ಸಾಗಣೆ ವ್ಯತ್ಯಯದಿಂದ ಪೂರೈಕೆಗೆ ಹೊಡೆತ ಬಿದ್ದಿದೆ. ಏರುತ್ತಿರುವ ವಿದ್ಯುತ್ ಬೇಡಿಕೆ ನಡುವೆ ಉತ್ಪಾದನೆ ಕುಸಿಯುವ ಆತಂಕ ಎದುರಾಗಿದೆ. ಮಳೆ ಹಾಗೂ ರೈಲು ಸಾಗಣೆ ವಿಳಂಬದಿಂದ ಕಲ್ಲಿದ್ದಲು ಪೂರೈಕೆ ಮತ್ತಷ್ಟು ಬಾಧಿತವಾಗಿದ್ದು, ರಾತ್ರಿ ವಿದ್ಯುತ್ ಬೇಡಿಕೆ ಪೂರೈಕೆಗೆ ಉಷ್ಣ ವಿದ್ಯುತ್ ಸ್ಥಾವರಗಳ ಮೇಲಿನ ಅವಲಂಬನೆ ಮುಂದುವರಿದಿದೆ.**

# ಬ್ರಿಕ್ಸ್ ದೆಹಲಿ ಘೋಷಣೆಗೆ ಸರ್ವಾನುಮತದ ಅಂಗೀಕಾರ

● ವಿಕ್ರಮ ವಾಹಿನಿ । ನವದೆಹಲಿ

ರಾಜಧಾನಿಯಲ್ಲಿ ನಡೆಯುತ್ತಿರುವ 18ನೇ ಬ್ರಿಕ್ಸ್ ಶೃಂಗಸಭೆಯಲ್ಲಿ 'ದೆಹಲಿ ಘೋಷಣೆ'ಗೆ ಸರ್ವಾನುಮತದ ಅಂಗೀಕಾರ ದೊರೆತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶನಿವಾರ ಪ್ರಕಟಿಸಿದರು. ಭಾರತ್ ಮಂಟಪದಲ್ಲಿ ನಡೆಯುತ್ತಿರುವ ಎರಡು ದಿನಗಳ ಶೃಂಗಸಭೆಯಲ್ಲಿ ಬ್ರೆಜಿಲ್, ಚೀನಾ, ಭಾರತ ಸೇರಿದಂತೆ 11 ಸದಸ್ಯ ರಾಷ್ಟ್ರಗಳ ನಾಯಕರು ಭಾಗವಹಿಸಿದ್ದಾರೆ. ಜಾಗತಿಕ ವ್ಯಾಪಾರ, ಆರ್ಥಿಕ ಆಡಳಿತ, ಸಂಸ್ಕೃತಿ, ಮಹಿಳಾ ಸಬಲೀಕರಣ, ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿಗೆ ಸಂಬಂಧಿಸಿದ ಹಲವು ಪ್ರಮುಖ ನಿರ್ಣಯಗಳನ್ನು ಘೋಷಣೆಯಲ್ಲಿ ದಾಖಲಿಸಲಾಗಿದೆ.

ಆರಂಭದಲ್ಲಿ ಬ್ರೆಜಿಲ್, ರಷ್ಯಾ, ಭಾರತ, ಚೀನಾ ಹಾಗೂ ದಕ್ಷಿಣ ಆಫ್ರಿಕಾ ಒಳಗೊಂಡಿದ್ದ ಬ್ರಿಕ್ಸ್, 2024ರಲ್ಲಿ ಈಜಿಪ್ಟ್, ಇಥಿಯೋಪಿಯಾ, ಇರಾನ್, ಯುಎಇ ಮತ್ತು ಸೌದಿ ಅರೇಬಿಯಾವನ್ನು ಸೇರ್ಪಡೆಗೊಳಿಸಿಕೊಂಡಿತು. 2025ರಲ್ಲಿ ಇಂಡೋನೇಷ್ಯಾ ಸದಸ್ಯ ರಾಷ್ಟ್ರವಾಯಿತು. ಬೆಲಾರಸ್, ಬೊಲಿವಿಯಾ, ಕಝಾಕಿಸ್ತಾನ್, ಕ್ಯೂಬಾ, ಮಲೇಷ್ಯಾ, ನೈಜೀರಿಯಾ, ಥೈಲ್ಯಾಂಡ್, ಉಗಾಂಡಾ, ಉಜ್ಬೇಕಿಸ್ತಾನ್ ಮತ್ತು ವಿಯೆಟ್ನಾಂ ಪಾಲುದಾರ ರಾಷ್ಟ್ರಗಳಾಗಿವೆ.



**ಪ್ರಮುಖ 10 ಅಂಶಗಳಿಗೆ ನಾಯಕರ ಒಪ್ಪಿಗೆ**

**ರಕ್ಷಣಾವಾದಕ್ಕೆ ವಿರೋಧ:** ಹಠಾತ್ ಕಸ್ಟಮ್ಸ್ ಸುಂಕ, ಸುಂಕೇತರ ಅಡೆತಡೆ ಹಾಗೂ ಸಂರಕ್ಷಣಾತ್ಮಕ ಕ್ರಮಗಳು ಜಾಗತಿಕ ವ್ಯಾಪಾರಕ್ಕೆ ಹಾನಿಕರ ಎಂದು ಬ್ರಿಕ್ಸ್ ಹೇಳಿದೆ.

**ಏಕಪಕ್ಷೀಯ ನಿರ್ಬಂಧ ಖಂಡನೆ:** ವಿಶ್ವಸಂಸ್ಥೆ ಭದ್ರತಾ ಮಂಡಳಿ ಅನುಮತಿಯಿಲ್ಲದೆ ವಿಧಿಸುವ ಏಕಪಕ್ಷೀಯ, ದ್ವಿತೀಯ ಹಂತದ ನಿರ್ಬಂಧಗಳಿಗೆ ವಿರೋಧ.

**ಜಾಗತಿಕ ಆರ್ಥಿಕ ಸುಧಾರಣೆ:** ಐಎಂಎಫ್, ವಿಶ್ವಬ್ಯಾಂಕ್ ಸೇರಿದಂತೆ ಬ್ರೆಟನ್ ವುಡ್ಸ್ ಸಂಸ್ಥೆಗಳ ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆಗೆ ಕರೆ.

**ಡಬ್ಲ್ಯುಟಿಒ ಸುಧಾರಣೆ:** ವಿಶ್ವ ವ್ಯಾಪಾರ ಸಂಸ್ಥೆಯ ವಿವಾದ ಇತ್ಯರ್ಥ ವ್ಯವಸ್ಥೆ ಪುನಃಸ್ಥಾಪಿಸಿ, ಮೇಲ್ಮನವಿ ಮಂಡಳಿಗೆ ಸದಸ್ಯರ ನೇಮಕಕ್ಕೆ ಒತ್ತಾಯ.

**ಸಾಂಸ್ಕೃತಿಕ ಸಹಕಾರ:** ಬ್ರಿಕ್ಸ್ ರಾಷ್ಟ್ರಗಳ ಸಾಂಸ್ಕೃತಿಕ ಹಾಗೂ ಜನರ ನಡುವಿನ ವಿನಿಮಯಕ್ಕೆ ಒತ್ತು.

**ಸೃಜನಶೀಲ ಉದ್ಯಮಕ್ಕೆ ಉತ್ತೇಜನ:** ಕಲಾವಿದರು, ಸಾಂಸ್ಕೃತಿಕ ವೃತ್ತಿಪರರ ಕೌಶಲ್ಯಾಭಿವೃದ್ಧಿ ಹಾಗೂ ಸಾಂಪ್ರದಾಯಿಕ ಜ್ಞಾನ ಪದ್ಧತಿಗಳ ದಾಖಲೀಕರಣಕ್ಕೆ ಆದ್ಯತೆ.

**ಮಹಿಳಾ ಸಬಲೀಕರಣ:** ಮಹಿಳೆಯರ ಹಣಕಾಸು–ಡಿಜಿಟಲ್ ಒಳಗೊಳ್ಳುವಿಕೆ, ಕೌಶಲ್ಯಾಭಿವೃದ್ಧಿ ಹಾಗೂ ಉದ್ಯಮಶೀಲತೆಗೆ ಹೆಚ್ಚಿನ ಆದ್ಯತೆ.

**ಶಿಕ್ಷಣ ಸಹಕಾರ:** ಸುಸ್ಥಿರ ಅಭಿವೃದ್ಧಿ ಮತ್ತು ಎಲ್ಲರನ್ನೂ ಒಳಗೊಂಡ ಬೆಳವಣಿಗೆಗಾಗಿ ಶಿಕ್ಷಣ ಕ್ಷೇತ್ರದ ಸಹಕಾರ ಬಲಪಡಿಸುವ ಬದ್ಧತೆ.

**ಕೌಶಲ್ಯಾಭಿವೃದ್ಧಿ:** ಡಿಜಿಟಲ್ ಸಾಕ್ಷರತೆ, ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗಿಗಳ ಸನ್ನದ್ಧತೆ ಹೆಚ್ಚಿಸಲು ಕ್ರಮ.

**ಜಾಗತಿಕ ಪಾತ್ರ:** ಬ್ರಿಕ್ಸ್ ಯಾವುದೇ ದೇಶದ ವಿರುದ್ಧ ರಚನೆಯಾದ ಸಂಘಟನೆಯಲ್ಲ; ಜಾಗತಿಕ ವೇದಿಕೆಯಲ್ಲಿ ತನ್ನದೇ ಆದ ವಿಶಿಷ್ಟ ಗುರುತನ್ನು ಹೊಂದಿದೆ.

## ಪತ್ನಿಯೊಂದಿಗೆ ಜಗಳ; ಟ್ರಾನ್ಸ್‌ಫಾರ್ಮರ್ ಏರಿ ಹೈಡ್ರಾಮಾ

● ವಿಕ್ರಮ ವಾಹಿನಿ । ಬಳ್ಳಾರಿ

ಪತ್ನಿಯೊಂದಿಗೆ ಜಗಳದಿಂದ ಬೇಸತ್ತ ವ್ಯಕ್ತಿಯೊಬ್ಬ ಪೊಲೀಸ್ ಠಾಣೆ ಎದುರಿನ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಏರಿ ಆತಂಕ ಸೃಷ್ಟಿಸಿದ ಘಟನೆ ಬಳ್ಳಾರಿಯ ಬ್ರೂಸ್‌ಪೇಟೆ ಪೊಲೀಸ್ ಠಾಣೆ ಎದುರು ನಡೆದಿದೆ.

ಮುಂಡರಗಿ ಪ್ರದೇಶದ ನಿವಾಸಿ ಇಸ್ಮಾಯಿಲ್ ಎಂಬಾತ ಪತ್ನಿಯೊಂದಿಗೆ ಠಾಣೆಗೆ ಬಂದಿದ್ದ ಎನ್ನಲಾಗಿದ್ದು, ಅಲ್ಲಿಯೇ ಇಬ್ಬರ ನಡುವೆ ಜಗಳ ನಡೆದಿದೆ. ಬಳಿಕ ಬೇಸರಗೊಂಡ ಇಸ್ಮಾಯಿಲ್ ಏಕಾಏಕಿ ಠಾಣೆಯಿಂದ ಹೊರಗೆ ಓಡಿ ಹೋಗಿ ಸಮೀಪದಲ್ಲಿದ್ದ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಏರಿದ್ದಾನೆ.

ಇದರಿಂದ ಪೊಲೀಸರು ಹಾಗೂ ಸ್ಥಳೀಯರು ಕೆಲಕಾಲ ಆತಂಕಕ್ಕೊಳಗಾಗಿದ್ದರು. ತಕ್ಷಣ ಕಾರ್ಯಪ್ರವೃತ್ತರಾದ ಪೊಲೀಸರು ಆತನನ್ನು ಸಮಾಧಾನಪಡಿಸಿ, ಸುರಕ್ಷಿತವಾಗಿ ಕೆಳಗಿಳಿಸಿದ್ದಾರೆ.

ಘಟನೆಯ ದೃಶ್ಯಗಳನ್ನು ಸ್ಥಳೀಯರೊಬ್ಬರು ಮೊಬೈಲ್‌ನಲ್ಲಿ ಸೆರೆಹಿಡಿದಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ವೈರಲ್ ಆಗಿದೆ. ಕೌಟುಂಬಿಕ ಕಲಹವೇ ಘಟನೆಗೆ ಕಾರಣ ಎನ್ನಲಾಗಿದ್ದು, ಪೊಲೀಸರು ಮಾಹಿತಿ ಕಲೆಹಾಕುತ್ತಿದ್ದಾರೆ.

## 'ಇನ್ನೂ ನಾಲ್ಕೈದು ಸಚಿವರ ಮೇಲೆ ಇಡಿ ದಾಳಿ'

### ಈ ರೀತಿಯ ದಾಳಿಯಲ್ಲಿ ಡಿಕೆಶಿ ಪರಿಣಿತರು: ರಾಜಣ್ಣ ಟಾಂಗ್

● ವಿಕ್ರಮ ವಾಹಿನಿ । ಬೆಂಗಳೂರು

ಸಚಿವ ಸತೀಶ್ ಜಾರಕಿಹೊಳಿ ಅವರ ನಿವಾಸ ಹಾಗೂ ಆಪ್ತರ ಮನೆಗಳ ಮೇಲೆ ನಡೆದ ಜಾರಿ ನಿರ್ದೇಶನಾಲಯ (ಇಡಿ) ದಾಳಿ ರಾಜಕೀಯ ಪ್ರೇರಿತ ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಆರೋಪಿಸಿದ್ದಾರೆ.

ಸತೀಶ್ ಜಾರಕಿಹೊಳಿ ಅವರನ್ನು ಕಳೆದ ನಾಲ್ಕು ದಶಕಗಳಿಂದ ನೋಡಿದ್ದೇನೆ. ಅವರು ಸಂಭಾವಿತ ವ್ಯಕ್ತಿಯಾಗಿದ್ದು, ವ್ಯವಹಾರದಲ್ಲೂ ಶ್ರೇಷ್ಠರು. ಯಾವುದೇ ವಿಚಾರದಲ್ಲಿ ತಪ್ಪು ಮಾಡುವುದಿಲ್ಲ. ಈ ವಿಚಾರದಲ್ಲಿ ತಾವು ಸತೀಶ್ ಜಾರಕಿಹೊಳಿ ಅವರೊಂದಿಗೆ ನಿಲ್ಲುವುದಾಗಿ ರಾಜಣ್ಣ ಹೇಳಿದರು. ಸತೀಶ್ ಅವರನ್ನು ಭೇಟಿ ಮಾಡಲು ಅವರ ಮನೆಗೆ ತೆರಳಿದ್ದೆ. ಆದರೆ ಅವರು ಕೆಲಸದ ನಿಮಿತ್ತ ಹೊರಗಡೆ ಹೋಗಿದ್ದರು. ಅವರ ಕುಟುಂಬದವರು ಹಾಗೂ ಅಭಿಮಾನಿಗಳೊಂದಿಗೆ ಮಾತನಾಡಿದ್ದು, ಸತೀಶ್ ಅವರೊಂದಿಗೆ ಇರುವುದಾಗಿ ಭರವಸೆ ನೀಡಿದ್ದೇನೆ ಎಂದು ತಿಳಿಸಿದರು. ಕೇಂದ್ರ ಸರ್ಕಾರ ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದ ರಾಜಣ್ಣ, ಇಡಿ ದಾಳಿ ರಾಜಕೀಯ ಉದ್ದೇಶದಿಂದ ಕೂಡಿದೆ ಎಂದರು.

ಇನ್ನೂ ನಾಲ್ಕೈದು ಸಚಿವರ ಮೇಲೆ ಇಡಿ ದಾಳಿ ನಡೆಯಬಹುದು ಎಂಬ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, 'ಈ ಬಗ್ಗೆ ಅವರನ್ನೇ ಕೇಳಬೇಕು. ಈ ರೀತಿಯ ದಾಳಿಯಲ್ಲಿ ಅವರು ಪರಿಣಿತರು. ಇದರ ಹಿಂದೆ ಯಾರದ್ದಾದರೂ ಕೈವಾಡ ಇರಬಹುದು' ಎಂದು ತಿರುಗೇಟು ನೀಡಿದರು.

ಇಡಿ ದಾಳಿ ರಾಜಕೀಯ ಪ್ರೇರಿತವಾಗಿದ್ದು, ತನಿಖಾ ಸಂಸ್ಥೆಗಳ ದುರ್ಬಳಕೆ ವಿರುದ್ಧ ಕೇಂದ್ರ ಸರ್ಕಾರ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ರಾಜಣ್ಣ ಆಗ್ರಹಿಸಿದರು.



ಶನಿವಾರ ಮಹಾಲಕ್ಷ್ಮಿಪುರಂ ಬಿಜಿಎಸ್ ಕ್ಯಾಂಪಸ್ ನಲ್ಲಿ ಬೆನಕನ ಅಮಾವಾಸ್ಯೆಯ ಪ್ರಯುಕ್ತ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಹೋಮ– ಅವನಾದಿಗಳು ಹಾಗೂ ಶ್ರೀಅಭಯಆಂಜನೇಯ ಸ್ವಾಮಿಗೆ ಪಂಚಾಮೃತ ಅಭಿಷೇಕ ಶ್ರೀ ಪ್ರಸನ್ನ ಮಹಾಗಣಪತಿ ಹಾಗೂ ಶ್ರೀ ಲಲಿತಾಂಬಿಕಾ ದೇವಿಗೆ ಷೋಡಶೋಪಚಾರ ಪೂಜಾ, ಮಹಾಮಂಗಳಾರತಿ ನೆರವೇರಿತು. ಬೆಂಗಳೂರು ಶಾಖಾ ಮಠದ ಶ್ರೀ ಶ್ರೀ ಸೌಮ್ಯನಾಥ ಸ್ವಾಮೀಜಿಯವರು ಉಪಸ್ಥಿತರಿದ್ದರು

## ಪಂಚತಾರಾ ಹೋಟೆಲ್‌ನಲ್ಲಿ ಪೈಲಟ್ ಶವವಾಗಿ ಪತ್ತೆ

● ವಿಕ್ರಮ ವಾಹಿನಿ । ನವದೆಹಲಿ

ನವದೆಹಲಿ: ರಾಜಧಾನಿಯ ವಸಂತ್ ಕುಂಜ್‌ನ ಪ್ರತಿಷ್ಠಿತ ಪಂಚತಾರಾ ಹೋಟೆಲ್‌ವೊಂದರ ಕೊಠಡಿಯಲ್ಲಿ ಫ್ಲೈಟ್ ಕ್ಯಾಪ್ಟನ್ ಸನ್ನಿ ಅಸಲ್ದೇಕರ್ ಶವವಾಗಿ ಪತ್ತೆಯಾಗಿರುವ ಘಟನೆ ನಡೆದಿದೆ.

ಸನ್ನಿ ಸೆ.10ರಂದು 'ಹೋಟೆಲ್ ದಿ ಗ್ರಾಂಡ್'ನಲ್ಲಿ ವಾಸ್ತವ್ಯ ಹೂಡಿದ್ದರು. ಮರುದಿನ ಅವರ ಕರೆಗಳಿಗೆ ಪ್ರತಿಕ್ರಿಯೆ ಸಿಗದ ಹಿನ್ನೆಲೆಯಲ್ಲಿ ಸಹೋದರ ಹೋಟೆಲ್ ಆಡಳಿತಕ್ಕೆ ಮಾಹಿತಿ ನೀಡಿದ್ದಾರೆ. ಸಿಬ್ಬಂದಿ ಕೊಠಡಿಗೆ ತೆರಳಿದಾಗ ಬಾಗಿಲು ಒಳಗಿನಿಂದ ಲಾಕ್ ಆಗಿತ್ತು.

ಮಾಸ್ಟರ್ ಕೀ ಬಳಸಿ ಬಾಗಿಲು ತೆರೆದಾಗ ಸನ್ನಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ತಕ್ಷಣ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ವೈದ್ಯರು ಅವರು ಮೃತಪಟ್ಟಿರುವುದಾಗಿ ಘೋಷಿಸಿದರು.

ದೆಹಲಿಯ ಸಫ್ದರ್‌ಜಂಗ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗಿದ್ದು, ಅಂತಿಮ ವರದಿ ಬಂದ ಬಳಿಕ ಸಾವಿಗೆ ನಿಖರ ಕಾರಣ ತಿಳಿದುಬರಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಿಎನ್‌ಎಸ್‌ಎಸ್‌ನ ಸೆಕ್ಷನ್ 194ರ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಸಾವಿನ ಕಾರಣದ ಕುರಿತು ತನಿಖೆ ಮುಂದುವರಿಸಿದ್ದಾರೆ.

## ಇಡಿ ಆರೋಪಕ್ಕೆ ದಾಖಲೆ ಇದ್ದರೆ ಸಾಬೀತುಪಡಿಸಲಿ: ಸತೀಶ್ ಜಾರಕಿಹೊಳಿ

● ವಿಕ್ರಮ ವಾಹಿನಿ । ಬೆಂಗಳೂರು

ಆಫ್ರಿಕಾದ ಚಿನ್ನದ ಗಣಿಗಾರಿಕೆ ಸಂಸ್ಥೆಯಲ್ಲಿ ಶೇ.40ರಷ್ಟು ಪಾಲು ಹೊಂದಿರುವುದಾಗಿ ಜಾರಿ ನಿರ್ದೇಶನಾಲಯ (ಇಡಿ) ಹೇಳಿದ್ದರೆ, ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ನೀಡಿ ಸಾಬೀತುಪಡಿಸಲಿ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಇಡಿ ಮಾಧ್ಯಮ ಪ್ರಕಟಣೆಯಲ್ಲಿ ಹೂಡಿಕೆ ಮತ್ತು ಪಿಡಬ್ಲ್ಯುಡಿ ಇಲಾಖೆಗೆ ಸಂಬಂಧಿಸಿದ ಅಂಶಗಳ ಬಗ್ಗೆ ಶಂಕೆ ವ್ಯಕ್ತಪಡಿಸಲಾಗಿದೆ ಅಷ್ಟೇ. ನೋಟಿಸ್ ನೀಡಿದ ಬಳಿಕ ವಿಚಾರಣೆಗೆ ಹಾಜರಾಗಿ, ತಮ್ಮ ದಾಖಲೆಗಳನ್ನು ಸಲ್ಲಿಸಿ ಎಲ್ಲ ಪ್ರಶ್ನೆಗಳಿಗೆ ಸ್ಪಷ್ಟನೆ ನೀಡುವುದಾಗಿ ಹೇಳಿದರು.

ಪಿಡಬ್ಲ್ಯುಡಿ ಇಲಾಖೆಯಲ್ಲಿ ಲಂಚ ಪಡೆದಿರುವ ಬಗ್ಗೆಯೂ ಶಂಕೆ ವ್ಯಕ್ತಪಡಿಸಲಾಗಿದೆ. ಮೊದಲು ವಿಚಾರಣೆ ನಡೆಯಲಿ, ಬಳಿಕ ದಾಖಲೆಗಳ ಆಧಾರದಲ್ಲಿ ಉತ್ತರಿಸುತ್ತೇವೆ. ಇಡಿ ಪ್ರಕಟಣೆಯಿಂದ ರಾಜಕೀಯವಾಗಿ ಹಾನಿಯಾಗಬಹುದು. ಆದರೆ ನಮಗೆ ಇಡಿಗಿಂತ ಮೊದಲು ಸಾರ್ವಜನಿಕರೇ ನ್ಯಾಯಾಲಯ ಎಂದು ಹೇಳಿದರು.

ಇಡಿಗೆ ದೂರು ನೀಡಿದವರ ಬಗ್ಗೆ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿದ್ದೇನೆ. ಈ ವಿಚಾರವನ್ನು ಮುಖ್ಯಮಂತ್ರಿಗಳು ನೋಡಿಕೊಳ್ಳುತ್ತಾರೆ ಎಂದರು. ಉದ್ಯಮಿ ವಿಜಯ್ ಮಲ್ಯ ತಮ್ಮನ್ನು ಬೆಂಬಲಿಸಿ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಕುರಿತು ಪ್ರತಿಕ್ರಿಯಿಸಿದ ಸಚಿವರು, 'ಅವರಿಗೆ ಧನ್ಯವಾದ' ಎಂದರು.

**ಧಾರವಾಡ:** ಸತೀಶ್ ಜಾರಕಿಹೊಳಿ ಅವರ ಮೇಲಿನ ಇಡಿ ದಾಳಿ ಕುರಿತು ಆರೋಗ್ಯ ಸಚಿವ ಯು.ಟಿ.ಖಾದರ್ ಪ್ರತಿಕ್ರಿಯಿಸಿ, ಸಣ್ಣ ಸಮುದಾಯದಿಂದ ಬಂದು ದೊಡ್ಡ ಸ್ಥಾನಕ್ಕೇರಿದ ಸಚಿವರ ಮೇಲೆ ಇಡಿ ದಾಳಿ ನಡೆಸಿರುವುದೇಕೆ ಎಂದು ಪ್ರಶ್ನಿಸಿದರು. ರಾಜಕೀಯವಾಗಿ ಯಾರನ್ನೂ ಗುರಿಯಾಗಿಸುವ ಪ್ರವೃತ್ತಿ ಸಲ್ಲದು ಎಂದರು.

\ಧಾರವಾಡ ಜಿಲ್ಲಾಸ್ಪತ್ರೆಯನ್ನು 1,000 ಹಾಸಿಗೆಗಳ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸುವ ಯೋಜನೆ ರೂಪಿಸಲಾಗುತ್ತಿದೆ. ಕಲಬೆರಕೆ ಆಹಾರ ಹಾಗೂ ನಕಲಿ ವೈದ್ಯರ ವಿರುದ್ಧ ತಪಾಸಣೆ ತೀವ್ರಗೊಳಿಸಲಾಗಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಖಾದರ್ ತಿಳಿಸಿದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

# ಒಂದೇ ದಿನ ಶ್ರೀಸ್ವರ್ಣಗೌರಿ ವ್ರತ ಹಾಗೂ ಶ್ರೀವರಸಿದ್ಧಿ ವಿನಾಯಕ ವ್ರತ

ಸಾಮಾನ್ಯವಾಗಿ ಭಾದ್ರಪದ ಮಾಸದ ತದಿಗೆಯಂದು ಹಸ್ತಾ ನಕ್ಷತ್ರವಿರುವ ದಿನ, ಶ್ರೀಪಾರ್ವತಿದೇವಿಯನ್ನು ಸ್ವರ್ಣಗೌರಿ ಎಂದು ಪೂಜಿಸಲಾಗುತ್ತದೆ. ಈ ವರ್ಷ 13ರಂದು ಭಾನುವಾರ ಹಸ್ತಾ ನಕ್ಷತ್ರವಿದೆ, ಆದರೆ ಸೂರ್ಯೋದಯ ಕಾಲಕ್ಕೆ ತದಿಗೆಯಿರುವುದಿಲ್ಲ, ಬದಲಾಗಿ ಸೊಮವಾರ ಸೂರ್ಯೋದಯ ಕಾಲಕ್ಕೆ ತದಿಗೆ ಹಾಗೂ ಚಿತ್ತಾ ನಕ್ಷತ್ರವಿರುತ್ತದೆ. ವ್ರತಗಳ ಆಚರಣೆಗೆ ನಕ್ಷತ್ರಕ್ಕಿಂತ ತಿಥಿಯೇ ಮುಖ್ಯವಾದ ಕಾರಣ, ಸೋಮವಾರವೇ ಶ್ರೀಸ್ವರ್ಣಗೌರಿ ವ್ರತ.

ಇದೇ ದಿನ ಮಧ್ಯಾಹ್ನ ವ್ಯಾಪಿನಿ ಚೌತಿಯಿದೆ, ಹಾಗೆಯೇ ಮರುದಿನ ಮಂಗಳವಾರ ಋಷಿಪಂಚಮಿಯಿರುವುದರಿಂದ ಸೋಮವಾರವೇ ಚೌತಿಯೆಂದು ಪರಿಗಣಿಸಬೇಕು. ಆದ ಕಾರಣ ನಮ್ಮೆಲ್ಲರ ಪ್ರೀತಿಯ ಗಣಪನನ್ನು ಸೋಮವಾರವೇ ವ್ರತದ ಮೂಲಕ ಪೂಜಿಸಬೇಕು.

ಈಗ, ಈ ವ್ರತಗಳ ಮಹತ್ವ ಹಾಗೂ ಆಚರಣೆ ಬಗ್ಗೆ ತಿಳಿಯೋಣ.

**ಸ್ವರ್ಣಗೌರಿ ವ್ರತ**

ಗೌರಿ ಎಂದರೆ: ತಿಳಿಯಾದ ಬಿಳಿ ಬಣ್ಣ ಮಿಶ್ರಿತ ಸುವರ್ಣ (ಬಂಗಾರ) ವರ್ಣ ಎಂದರ್ಥ. ಪಾರ್ವತಿ ದೇವಿ ಶಿವನನ್ನು ವರಿಸಲೆಂದು ಮಾಡಿದ ವ್ರತವಿದು. ಹಾಗಾಗಿ ಅತ್ಯಂತ ಫಲಪ್ರದವಾದ ವ್ರತವಾಗಿದೆ. ಈ ವ್ರತವನ್ನು ಕೇವಲ ಮಹಿಳೆಯರು ಮಾತ್ರ ಆಚರಿಸದೆ, ದಂಪತಿ ಒಟ್ಟಿಗೆ ಆಚರಣೆ ಮಾಡಿದರೆ ಫಲ ಹೆಚ್ಚು.

ಹಿಂದೆ ಪರ್ವತರಾಜನು ತನ್ನ ಮಗಳಾದ ಪಾರ್ವತಿ ದೇವಿಯನ್ನು, ನಾರಾಯಣನಿಗೆ ಕೊಟ್ಟು ಮದುವೆ ಮಾಡಲು ಯೋಚಿಸಿದ. ಆದರೆ ಶಿವನನ್ನೇ ವರಿಸಬೇಕೆಂದಿದ್ದ ಪಾರ್ವತಿ, ಇದರಿಂದ ಮನನೊಂದು ಖಿನ್ನಳಾಗಿ ಮನೆ ಬಿಟ್ಟು ಕಾಡು ಸೇರಿದಳು. ಶಿವನನ್ನೇ ಪತಿಯನ್ನಾಗಿ ಪಡೆಯಬೇಕೆಂದು ಉದ್ದೇಶಿಸಿ ಮರಳಿನಿಂದ ಲಿಂಗವನ್ನು ತಯಾರಿಸಿ ಭಕ್ತಿಯಿಂದ ಪೂಜಿಸಿದಳು. ಉಪವಾಸವಿದ್ದು, ರಾತ್ರಿ ಜಾಗರಣೆ ಮಾಡಿ ಶಿವನನ್ನು ಮೆಚ್ಚಿಸಿದಳು. ಆ ದಿನವೇ ಭಾದ್ರಪದ ಶುಕ್ಲ ತೃತೀಯಾ ತಿಥಿ.

ಈ ವ್ರತವನ್ನು ಮಾಡಿದ್ದರಿಂದ ಪಾರ್ವತಿ ದೇವಿ ಶಿವನನ್ನು ವರಿಸಿ ಅಖಂಡ ಸೌಭಾಗ್ಯ ವನ್ನು ಪಡೆದಳು. ಅಂದಿನಿಂದ ಸೌಭಾಗ್ಯಕ್ಕಾಗಿ ಈ ವ್ರತದ ಮೂಲಕ ಶ್ರೀಉಮಾ ಮಹೇಶ್ವರ ರನ್ನು ಪೂಜಿಸುವುದು ರೂಢಿಯಾಗಿದೆ.

**ಗೌರಿ:** ಪರ್ವತ ರಾಜನ ಮಗಳಾದ ಪಾರ್ವತಿ ದೇವಿಯು ಸಹಜವಾಗಿ ಶ್ಯಾಮಲವರ್ಣದವಳು. ಈಕೆ ಶ್ರೀರುದ್ರದೇವರನ್ನು ಮದುವೆಯಾಗಬೇಕೆಂಬ ಬಯಕೆ ಹೊಂದಿರುತ್ತಾಳೆ. ಆದರೆ ಶಂಭು (ತಿಳಿ ಬಿಳಿ) ವರ್ಣದ ರುದ್ರದೇವರು ಕಪ್ಪು ವರ್ಣದ ಪಾರ್ವತಿಯನ್ನು ಮದುವೆಯಾಗಲು ಒಪ್ಪುವುದಿಲ್ಲ. ಆಗ ದೇವಿಯು ಬ್ರಹ್ಮನ ಕುರಿತು ತಪಸ್ಸು ಆಚರಿಸುತ್ತಾಳೆ. ಈಕೆಯ ತಪಸ್ಸಿಗೆ ಮೆಚ್ಚಿದ ಬ್ರಹ್ಮದೇವರು ಪಾರ್ವತಿದೇವಿಯನ್ನು ಅನುಗ್ರಹಿಸುತ್ತಾರೆ. ಆಗ ಆಕೆಯ ದೇಹದಲ್ಲಿದ್ದ ಕಪ್ಪುವರ್ಣ ಕಾಳ(ಕಪ್ಪು) ರೂಪವಾಗಿ, ದೇವಿ ತಿಳಿ ಬಂಗಾರದ ಬಣ್ಣ ಪಡೆದಳು. ಹಾಗಾಗಿ ಶ್ರೀ ಪಾರ್ವತಿ ದೇವಿಯನ್ನು ಸ್ವರ್ಣಗೌರಿ ಎನ್ನಲಾಗುತ್ತದೆ.

ದೇವಿಯನ್ನು ಭಾದ್ರಪದ ಮಾಸ ತೃತೀಯ(ತದಿಗೆ)ದಂದು ಹಸ್ತಾ ನಕ್ಷತ್ರವಿರುವ ದಿನ ಶ್ರದ್ಧಾ, ಭಕ್ತಿಯಿಂದ ವಿಶೇಷವಾಗಿ ಪೂಜಿಸಬೇಕು. ಈ ದಿನ ಮುಂಜಾನೆ ಎದ್ದು ಶುಚಿರ್ಭೂತರಾಗಿ ಮನೆಯ ಮುಂಬಾಗಿಲು ಹಾಗೂ ದೇವರ ಮನೆಯ ಬಾಗಿಲನ್ನು ತಳಿರು ತೋರಣಗಳಿಂದ ಅಲಂಕರಿಸಬೇಕು.

ದೇವರ ಮನೆಯಲ್ಲಾಗಲಿ, ಅಂಗಳದಲ್ಲಾಗಲಿ ಗೋಮಯ, ಗೋಮೂತ್ರದಿಂದ ಶುದ್ಧೀಕರಿಸಬೇಕು. ಆ ಜಾಗದಲ್ಲಿ ಮಂಟಪ ನಿರ್ಮಾಣ ಮಾಡಿ, ಅದರ ಮಧ್ಯೆ ಬಾಳೆ ಎಲೆ ಹರಡಿ ಅದರ ಮೇಲೆ ಅಕ್ಕಿ ರಾಶಿ ಹಾಕಬೇಕು. ಎಂಟು ದಳದ ಪದ್ಮ ಬರೆದು ಮಧ್ಯದಲ್ಲಿ ಉಳ್ಳವರು ಬೆಳ್ಳಿ ಅಥವಾ ತಾಮ್ರ, ಹಿತ್ತಾಳೆ ತಂಬಿಗೆಯನ್ನು ಇಡಬೇಕು. ಮಂಗಳದ್ರವ್ಯದಿಂದ ಕೂಡಿದ ನೀರನ್ನು ತುಂಬಿ, ಮೇಲೆ ಮಾವಿನ ಎಲೆಗಳ ಗೊಂಚಲು ಹಾಗೂ ತೆಂಗಿನಕಾಯಿ ಇಡಬೇಕು. ತೆಂಗಿನಕಾಯಿಗೆ ಅರಿಸಿನ ಹಚ್ಚಿ ಅದರ ಮೇಲೆ ದೇವಿಯ ಮೊಗವನ್ನು ಕುಂಕುಮದಿಂದ ಬರೆಯಬೇಕು.

ಧ್ಯಾನ, ಆವಾಹನ, ಆಸನ, ಅರ್ಘ್ಯ, ಪಾದ್ಯ, ಆಚಮನ,ಸ್ನಾನ, ಪಂಚಾಮೃತಾಭಿಷೇಕ ನಡೆಸಿ, ವಸ್ತ್ರ ಹಾಗೂ ಉಪವೀತ ಸಮರ್ಪಿಸಬೇಕು. ಗಂಧ, ಅರಿಸಿನ, ಕುಂಕುಮ ಅರ್ಪಿಸಿ, ಕಾಡಿಗೆ, ಕನ್ನಡಿ ಮತ್ತಿತರ ಅಲಂಕಾರಿಕ ಸಾಮಗ್ರಿಗಳು ಮತ್ತು ಮಂಗಳದ್ರವ್ಯಗಳನ್ನು ಇಟ್ಟು ಅರ್ಚಿಸಬೇಕು. ಹದಿನಾರು ಎಳೆಯ ದಾರ ಗಳನ್ನು ತೆಗೆದುಕೊಂಡು

**ಶಾಂತರೀತಿಯ ಗಣಪನನ್ನು ಪೂಜಿಸುವುದು ಹೇಗೆ?:**

ಭಾದ್ರಪದ ಮಾಸದ ಚೌತಿ ದಿನ ಗಣಪನನ್ನು ಶ್ರೀವರಸಿದ್ಧಿ ವಿನಾಯಕ ಎಂದು ಕರೆದು ಪೂಜಿಸುವ ವ್ರತ ಆಚರಿಸಲಾಗುತ್ತದೆ. ಬೆಳಗ್ಗೆ ಎದ್ದು ಶುಚಿರ್ಭೂತರಾಗಿ ತಳಿರು ತೋರಣಗಳಿಂದ ಮನೆಯ ಬಾಗಿಲು ಹಾಗೂ ದೇವರ ಮಂಟಪವನ್ನು ಅಲಂಕರಿಸಬೇಕು. ಮಧ್ಯದಲ್ಲಿ ಮೃಣ್ಮಯ(ಮಣ್ಣಿನಿಂದ), ಹರಿದ್ರಾ(ಅರಿಸಿನ) ಅಥವಾ ಗೋಮಯ(ದೇಸಿ ತಳಿ ಹಸುವಿನ ಸಗಣಿ)ದಿಂದ ತಯಾರಿಸಿದ ಶ್ರೀಗಣಪತಿ ಮೂರ್ತಿಯನ್ನು ಇಡಬೇಕು. ಮೊದಲಿಗೆ ಪೂಜೆಗೆ ಬೇಕಾದ ಶುದ್ಧವಾದ ನೀರನ್ನು ತಂಬಿಗೆಯಲ್ಲಿ ತುಂಬಿ ಗಂಗಾದಿ ಸಕಲ ನದಿಗಳನ್ನು ಧ್ಯಾನಿಸಿ ಪೂಜಿಸಬೇಕು. ಈ ನೀರಿನಿಂದ ಗಣಪನ ಮೂರ್ತಿ, ಪೂಜಾಸಾಮಗ್ರಿಗಳು ಹಾಗೂ ತನಗೆ ಪ್ರೋಕ್ಷಣೆ ಮಾಡಿಕೊಳ್ಳಬೇಕು.

ನಂತರ ಪುಷ್ಪ, ಮಂತ್ರಾಕ್ಷತೆಯನ್ನು ಕೈಯ್ಯಲ್ಲಿಡಿದು ರಕ್ತಾಂಬರೋ ರಕ್ತತನುಃ ರಕ್ತಮಾಲ್ಯಾನುಲೇಪನ। ಲಂಬೋದರೋ ಗಜಮುಖಃ ಪಾಶಾದಂತಾಂಕುಶಾಭಯೇ। ಬಿಭ್ರದ್ಧ್ಯೇಯೋ ವಿಘ್ನಹರಃ ಕಾಮದಃ ತ್ವರಯಾ ಹ್ಯಯಮ್॥ ಎಂದು ಧ್ಯಾನಿಸಿ ಪ್ರತಿಮೆಯಲ್ಲಿ ಓಂ ಕ್ಷಿಪ್ರ ಪ್ರಸಾದಾಯ ನಮಃ ಓಂ ಎಂದು ಆವಾಹನೆ ಮಾಡಬೇಕು.

ನಂತರ ಆಸನ, ಅರ್ಘ್ಯ, ಪಾದಾದಿಗಳನ್ನು ನೀಡಿ, ಪ್ರೋಕ್ಷಣೆ ಮೂಲಕ ಅಭಿಷೇಕ ಮಾಡಬೇಕು. ವಸ್ತ್ರ, ಉಪವೀತ, ಗಂಧ ಸಮರ್ಪಿಸಿ ಹೂವುಗಳಿಂದ ಅಲಂಕರಿಸಬೇಕು. ನಾನಾವಿಧವಾದ ಪತ್ರೆಗಳಿಂದ ಅರ್ಚಿಸಬೇಕು. ಶ್ರೀಹರಿಗೆ ಸಮರ್ಪಿಸಿದ ತುಳಸಿಯನ್ನು ಈ ದಿನ ಮಾತ್ರ ಗಣಪತಿಗೆ ಅರ್ಪಿಸಬಹುದು.

ಧೂಪ, ದೀಪ, ನೈವೇದ್ಯ ಸಮರ್ಪಿಸಿ ಮಂಗಳಾರತಿ ಮಾಡಿ ಗಣಪನನ್ನು ಪ್ರಾರ್ಥಿಸಬೇಕು. ನಂತರ 21 ಗರಿಕೆಗಳನ್ನು ಏರಿಸಬೇಕು. ನಮಸ್ತೇ ವಿಘ್ನಸಂಹರ್ತ್ರೇ ನಮಸ್ತೇ ವಾಂಛಿತಪ್ರದ । ನಮಸ್ತೇ ದೇವದೇವೇಶ ನಮಸ್ತೇ ಗಣನಾಯಕ ॥ ಎಂದು ನಮಸ್ಕಾರ ಸಲ್ಲಿಸಿ ಪ್ರಾರ್ಥಿಸಬೇಕು.

ವಿಶೇಷವೆಂದರೆ ಗಣಪತಿಯ ರಾಶಿ ಕನ್ಯಾರಾಶಿಯಾಗಿದ್ದು, ಈ ರಾಶಿಗೆ ಬುಧ ಅಧಿಪತಿಯಾಗಿದ್ದಾನೆ. ಬುಧನು ಹಸಿರು ಬಣ್ಣದಲ್ಲಿರುವುದರಿಂದ ಗಣಪತಿಗೆ ಹಸಿರು ಪತ್ರೆಗಳಿಂದ ಪೂಜಿಸಬೇಕು.

ಹಾಗೆಯೇ ಗಣಪತಿಯ ರಕ್ತ ವರ್ಣ ಶರೀರದವನು. ಅಂದರೆ ಕುಜನ ಅಂಶ ಹೆಚ್ಚು ಇರುವನು. ಕುಜನು ಕೆಂಪು ಬಣ್ಣಕ್ಕೆ ಅಧಿಪತಿ. ಆದ್ದರಿಂದ ಕೆಂಪು ಬಣ್ಣದ ಹೂ, ಕೆಂಪು ಬಣ್ಣದ ಅಕ್ಷತೆ ಅರ್ಪಿಸಬೇಕು. ಕೆಂಪು ವಸ್ತ್ರ ಉಡಿಸಬೇಕು.

ತ್ವಾಂ ಗಂಧಪುಷ್ಪಧೂಪಾದ್ಯೈಃ ಅನಭ್ಯರ್ಚ ಜಗತ್ತ್ರಯೇ ।
ದೇವೈರಪಿ ತಥಾನ್ಯೈಶ್ಚ ಲಬ್ಧವ್ಯಂ ನಾಸ್ತಿ ಕುತ್ರಚಿತ್ ॥ (ಲಿಂಗ ಪುರಾಣ 105-25) (ದೇವತೆಗಳೇ ಆಗಲಿ ಅನ್ಯರೇ ಆಗಲಿ, ಯಾರು ಗಣಪತಿಯನ್ನು ಗಂಧ, ಪುಷ್ಪ, ಧೂಪಾದಿಗಳಿಂದ ಅರ್ಚಿಸುವದಿಲ್ಲವೋ ಅವರಿಗೆ ಮೂರೂ ಲೋಕದಲ್ಲಿ ಏನೂ ಲಭಿಸುವದಿಲ್ಲ.)

ಅಸ್ಮಿನ್ನಪೂಜಿತೋ ದೇವಾಃ ಪರಪೂಜಾ ಕೃತಾ ಯದಿ ।
ತದಾ ತತ್ಫಲಹಾನಿಃ ಸ್ಯಾನ್ನಾತ್ರ ಕಾರ್ಯಾರ್ಣ ವಿಚಾರಣಾ ॥ (ಶಿವ ಪುರಾಣ, ರುದ್ರಸಂಹಿತಾ, ಕುಮಾರ ಖಂಡ 18-23,24)

(ದೇವತೆಗಳು ಹೇಳುತ್ತಾರೆ, ಮನುಷ್ಯರು ಗಣಪತಿಯ ಪೂಜೆಯನ್ನು ಮೊದಲು ಮಾಡಿ ನಂತರ ನಮ್ಮ ಪೂಜೆಯನ್ನು ಮಾಡಬೇಕು, ಅವನ ಪೂಜೆ ಮಾಡಿದರೇ ನಮ್ಮ ಪೂಜೆ ಮಾಡಿದಂತೆ. ಒಂದು ವೇಳೆ ಹೀಗೆ ಪಾಲಿಸದಿದ್ದರೆ ಆ ಪೂಜಾಫಲವು ಹಾನಿಯಾಗುವುದು. ಅಂದರೆ ಪೂಜೆ ಮಾಡಿದುದರ ಫಲವೇ ಸಿಗುವುದಿಲ್ಲ).

ಆಧುನಿಕ ಯುಗದಲ್ಲಿ ಗಣಪ: ಪುಣೆಯ ಬಳಿ ಇರುವ ಚಿಂಚವಾಡದಲ್ಲಿ ಒಂದು ಕುಟುಂಬದ ಏಳು ತಲೆಮಾರಿನ ಜನರ ಮೇಲೆ ಗಣೇಶನ ಆವೇಶವಾಗುತ್ತಿತ್ತು. ಆ ಮನುಷ್ಯರನ್ನೇ ಗಣಪತಿ ಎಂದು ಪೂಜಿಸುತ್ತಿದ್ದ ಐತಿಹಾಸಿಕ ಉಲ್ಲೇಖವಿದೆ. 1810ರಲ್ಲಿ ಏಳನೆಯ ತಲೆಮಾರಿನ ವ್ಯಕ್ತಿಗೆ ಮಕ್ಕಳಿರಲಿಲ್ಲ. ಆತ ಸತ್ತಮೇಲೂ ಆತನ ದಾಯದಿಗಳು ಈಗಲೂ ಅಲ್ಲಿ ಪೂಜ್ಯರಾಗಿದ್ದಾರೆ. ಮೊದಲನೆಯ ಗಣೇಶ ಭಕ್ತನ ಹೆಸರು ಮೋರೋಭಾ. ಔರಂಗಜೇಬ್ ಕೂಡ ಈ ಮನೆತನಕ್ಕೆ ಎಂಟು ಹಳ್ಳಿಗಳ ದತ್ತಿಯನ್ನು ನೀಡಿದ್ದ ಎನ್ನಲಾಗಿದೆ. ಇಂತಹ ಶ್ರೀಸಿದ್ಧಿ ವಿನಾಯಕ ಅಂತರ್ಗತನಾಗಿರುವ ಶ್ರೀವಿಶ್ವಂಭರ ದೇವರನ್ನು ಪೂಜಿಸೋಣ, ಸಿದ್ಧಿ ಪಡೆಯೋಣ.

**ಶ್ರೀಶ ಚರಣಾರಾಧಕ:**
**ಕೆ.ವಿ.ಲಕ್ಷ್ಮೀನಾರಾಯಣಾಚಾರ್ಯ,**
**ಆನೇಕಲ್**

## ಮೊದಲಿಗೆ ಗಣಪ ಎಂದರೆ ಏನು?

ಗಣಪತಿಯನ್ನು ಬಿಡಿಸಿದಾಗ ಗಣ ಎಂದರೆ ತತ್ವ, ಪತಿ ಎಂದರೆ ಪ್ರಭುತ್ವ, ಜಗತ್ತಿನಲ್ಲಿರುವ ಕೆಲ ಮೂಲತತ್ವಗಳ ಅಧಿಪತಿ.

ಗಜಮುಖ: ಗ ಎಂದರೆ ಗತಿ, ಜ ಎಂದರೆ ಜನ್ಮ. ಯಾರಿಂದ ಈ ಜಗತ್ತು ಹುಟ್ಟಿ, ಯಾರಕಡೆ ಸಾಗಿ, ಯಾರಲ್ಲಿ ಲಯವಾಗುತ್ತದೆಯೋ ಅಂತಹ ಭಗವಂತ ಗಜಮುಖ ಸ್ವರೂಪದ ವಿಶ್ವಂಭರಮೂರ್ತಿ ಎಂದಾಗುತ್ತದೆ.

ಇಂತಹ ಗಣಪ ಶಿವಪುರಾಣದ ಪ್ರಕಾರ ಪಾರ್ವತಿ ದೇವಿಯು ದೇಹದ ಕೊಳೆಯನ್ನು ಮಣ್ಣಿನೊಂದಿಗೆ ಸೇರಿಸಿ ಸೃಜಿಸಿದ ಒಂದು ಸುಂದರ ಶಿಶುರೂಪ. ಈ ಕಥೆಯನ್ನು ಸಾಮಾನ್ಯವಾಗಿ ಎಲ್ಲರೂ ಕೇಳಿದ್ದೇವೆ. ಹಾಗೆಯೇ ಬ್ರಹ್ಮ ವೈವರ್ತ ಪುರಾಣ ದ ಪ್ರಕಾರ ಗಣಪನ ಹುಟ್ಟು ವಿಶೇಷವಾಗಿದೆ.



ಶ್ರೀರುದ್ರದೇವರ ಅಣತಿಯಂತೆ ಪಾರ್ವತಿ ದೇವಿಯು ಒಂದು ವರ್ಷ ಕಾಲ ಪುಣ್ಯಕ ವ್ರತ ವನ್ನು ಆಚರಿಸುತ್ತಾಳೆ. ನಂತರ ದೇವಿಯು ಸುಂದರ ಮಗುವಿಗೆ ಜನ್ಮ ನೀಡುತ್ತಾಳೆ. ಮಗುವಿನ ನಾಮಕರಣಕ್ಕೆ ಎಲ್ಲ ದೇವತೆಗಳನ್ನು ಆಹ್ವಾನಿಸುತ್ತಾರೆ. ಸುದ್ದಿ ತಿಳಿದು ಈ ಸಮಾರಂಭಕ್ಕೆ ಶನಿ ಯು ಆಗಮಿಸುತ್ತಾನೆ. ಎಲ್ಲರೂ ಮಗುವನ್ನು ವೀಕ್ಷಿಸಿ ಹರಸಲೆಂದು ಬಂದಾಗ ಶನಿಯ ದೃಷ್ಟಿ ತಾಗಿ ಮಗುವಿನ ಶಿರಸ್ಸು ಕತ್ತರಿಸಿಹೋಗಿ ಮಗು ಸತ್ತು ಹೋಗುತ್ತದೆ. ಇದನ್ನು ಗಮನಿಸಿ ಪಾರ್ವತಿದೇವಿ ರೋಧಿಸುತ್ತಾಳೆ. ಸುಂದರ ಸಮಾರಂಭ ಸೂತಕ ದ ಮನೆಯಾದುದನ್ನು ಗಮನಿಸಿದ ಮಹಾವಿಷ್ಣು ಗರುಡನನ್ನೇರಿ ಪುಷ್ಪ ಭದ್ರ ನದಿಯ ದಂಡೆಗೆ ಬರುತ್ತಾನೆ. ಅಲ್ಲಿ, ದೂರ್ವಾಸರ ಶಾಪಕ್ಕೆ ಗುರಿಯಾಗಿ ಮೋಕ್ಷಕ್ಕಾಗಿ ವಿಷ್ಣುವನ್ನೇ ಎದುರು ನೋಡುತ್ತಿದ್ದ ಆನೆ ಯ ತಲೆಯನ್ನು ತನ್ನ ಸುದರ್ಶನ ಚಕ್ರದಿಂದ ಕಡಿದು ತಂದು ಮಗುವಿಗೆ ಜೋಡಿಸುತ್ತಾನೆ. ನಂತರ ಈ ಮಗುವಿಗೆ ಗಜಮುಖ ಎಂಬ ಹೆಸರಾಗುತ್ತದೆ.

ಬ್ರಹ್ಮಾಂಡ ಪುರಾಣ ದ ಪ್ರಕಾರ ಭಂಡಾಸುರ ಎಂಬ ರಾಕ್ಷಸನನ್ನು ಸಂಹರಿಸುವ ಸಲುವಾಗಿ ದೇವಿ, ಈ ಗಣಪನನ್ನು ಸೃಷ್ಟಿಸಿದಳು ಎನ್ನಲಾಗುತ್ತದೆ.

ಲಿಂಗಪುರಾಣ ವೂ ಶ್ರೀರುದ್ರದೇವರು ಹಾಗೂ ಪಾರ್ವತಿ ದೇವಿಯರ ಸಮ್ಮಿಲನದಿಂದ ಗಣಪತಿ ಹುಟ್ಟಿದ ಎನ್ನುತ್ತದೆ. ಗಣಪನ ಹುಟ್ಟು ಹೇಗಾದರೂ ಇರಲಿ, ಸಕಲ ಕಾರ್ಯಗಳಲ್ಲಿ ನಿರ್ವಿಘ್ನತೆಯ ಜತೆ ಸಿದ್ಧಿಯನ್ನು ಕರುಣಿಸುವ ದೇವರು ಒಲಿದರೆ ಸಾಕಲ್ಲವೇ!!.

ಇಂತಹ ಗಣಪನ ಸ್ವರೂಪ ಹಾಗೂ ಅಂಗಗಳ ಬಗ್ಗೆ ತಿಳಿಯೋಣ:

ಗಣಪನಿಗೆ ದೊಡ್ಡದಾದ, ಮೊರ(ಗೆರಸಿ)ದಂತೆ ಅಗಲವಾದ ಕಿವಿಗಳಿರುವುದರಿಂದ ಶೂರ್ಪಕರ್ಣ ಎನ್ನಲಾಗುತ್ತದೆ. ಇದು ಗೆರಸಿಯಿಂದ ಧಾನ್ಯವನ್ನು ಬೇರ್ಪಡಿಸುವಂತೆ, ವಿವೇಕ ಬಳಸಿ ಸತ್ಯ-ಮಿಥ್ಯ(ಸುಳ್ಳು)ಗಳ ವ್ಯತ್ಯಾಸ ಅರಿಯುವ ತತ್ವವಾಗಿದೆ. ಅಂದರೆ ಶ್ರವಣ (ಕಿವಿಯಿಂದ ಕೇಳುವುದು) ಶುದ್ಧವಾಗಿರಬೇಕು.

ದೇಹ ದೊಡ್ಡದಾದರೂ ಕಣ್ಣು ಮಾತ್ರ ಕಿರುಗಣ್ಣು. ಇದು ಶುದ್ಧಜ್ಞಾನದ ಪ್ರತೀಕ. ಜ್ಞಾನ ಪ್ರಾಪ್ತಿಗಾಗಿ ಲೌಕಿಕವಾದ ಹೊರಗಣ್ಣನ್ನು ಕಿರಿದು ಮಾಡಿ ಒಳಗಣ್ಣು ವಿಶಾಲವಾಗಿ ತೆರೆದಿರಬೇಕು ಎಂಬುದು ಇದರ ಮೂಲ.

ಹಾಗೆಯೇ ದೊಡ್ಡ ಹೊಟ್ಟೆ. ಇದು ಬ್ರಹ್ಮಾಂಡವನ್ನೇ ತನ್ನೊಳಗಿರಿಸಿಕೊಂಡ ವಿಶ್ವಂಭರ ಮೂರ್ತಿಯನ್ನು ಪ್ರತಿನಿಧಿಸುತ್ತದೆ.

ಚತುರ್ಭುಜ ಗಳು ಧರ್ಮ, ಅರ್ಥ, ಕಾಮ, ಮೋಕ್ಷಗಳೆಂಬ ನಾಲ್ಕು ವಿಧದ ಪುಣ್ಯಫಲದಾಯಕಗಳನ್ನು ಪ್ರತಿಪಾದಿಸುತ್ತವೆ.

ಏಕದಂತವು ಚಂಚಲ ಮನಸ್ಸನ್ನು ಹತೋಟಿಯಲ್ಲಿಟ್ಟಾಗ ಮಾತ್ರ ಪೂರ್ಣಜ್ಞಾನ ಪ್ರಾಪ್ತಿ ಸಾಧ್ಯ ಎಂಬುದರ ಸಂಕೇತ. ಮನೋಕಾರಕ ಚಂದ್ರನನ್ನು ದಂಡಿಸಿ ಮನಸ್ಸನ್ನು ಹತೋಟಿಯಲ್ಲಿಡುವ ಉದ್ದೇಶದಿಂದ ಏಕದಂತನಾಗಿದ್ದಾನೆ.

**ಪಾಶಾಂಕುಶಧಾರಿ:** ಸಕಲ ಇಂದ್ರಿಯಗಳನ್ನು ನಿಗ್ರಹಿಸಲು ಅಂಕುಶ ಹಾಗೂ ಆಸೆ ಕಟ್ಟಿಡಲು ಪಾಶವನ್ನು ಧರಿಸಿದ್ದಾನೆ.

**ಸರ್ಪಕಟಿ:** ಷಟ್‌ಚಕ್ರಗಳಲ್ಲಿ ಮೂಲಾಧಾರ ಚಕ್ರ ತನ್ನಲ್ಲೇ ಇದೆ ಎಂದು ಸೂಚಿಸಲು ಕುಂಡಲಿನೀಶಕ್ತಿ ಸ್ವರೂಪದ ಸರ್ಪವನ್ನು ಕಟಿಗೆ ಸುತ್ತಿದ್ದಾನೆ.

**ಎರಡು ಹಸ್ತಗಳು:** ಒಂದು ಹಸ್ತದಲ್ಲಿ ಮೋದಕ ಹಿಡಿದು, ಭಕ್ತರಿಗೆ ಆಮೋದ ನೀಡುವುದರ ಜತೆ ಮತ್ತೊಂದು ಹಸ್ತವನ್ನು ಅಭಯ ಮುದ್ರೆಯಲ್ಲಿ ತೋರಿ ಭಕ್ತರನ್ನು ರಕ್ಷಿಸುವ ಭರವಸೆ ನೀಡಿದ್ದಾನೆ.

**ಮೂಷಕವಾಹನ:** ಈತಿ(ಇಲಿ, ಕ್ರಿಮಿ, ಕೀಟ) ಬಾಧೆ ನಿವಾರಿಸುವ ಧ್ಯೋತಕವಾಗಿ ಇಲಿಯನ್ನು ದಮನಿಸಿ ತನ್ನ ವಾಹನ ಮಾಡಿಕೊಂಡಿದ್ದಾನೆ.

**ಇದರ ಜತೆ ಮತ್ತಷ್ಟು ಅರಿಯೋಣ:** ಜ್ಞಾನ ಮತ್ತು ವಿವೇಕಗಳ ಅಧಿದೇವತೆಯಾಗಿ ಸಿದ್ಧಿ ಬುದ್ಧಿಯರ ಪತಿ(ಅಧಿದೇವತೆ)ಯೆನಿಸಿದ್ದಾನೆ. ಕ್ಷಿಪ್ರ ಪ್ರಸಾದ ಎಂದು ಸೂಚಿಸಲು ಲಾಭ ಮತ್ತು ಲಕ್ಷಗಳನ್ನು ಮಕ್ಕಳಾಗಿ(ಕೃಪೆ) ಹೊಂದಿದ್ದಾನೆ. ಭಕ್ತರಿಗಾಗಿ ಕಮಲದಂತಹ ಮೃದುವಾದ ಒಂದು ಪಾದ ಇಹವನ್ನೂ, ಮತ್ತೊಂದು ಪಾದ ಪರಲೋಕವನ್ನು ಸೂಚಿಸುತ್ತದೆ. ಹಣೆಯ ಕೆಳ ಭಾಗದಲ್ಲಿ ತ್ರಿಶೂಲ ಆಕಾರ, ತ್ರಿಕಾಲ(ಭೂತ, ವರ್ತಮಾನ, ಭವಿಷ್ಯತ್) ಸೂಚಿಸುತ್ತದೆ. ಚೇತನ, ಚಿತ್ತ, ಅಹಂಕಾರ, ಬುದ್ಧಿ ಮನಸ್ಸು ಎಂಬ ಪಂಚ ಜ್ಞಾನೇಂದ್ರಿಯಗಳು, ಪಂಚಕರ್ಮೇಂದ್ರಿಯಗಳು ಪಂಚತನ್ಮಾತ್ರೆಗಳು, ಪಂಚಭೂತಗಳು ಹೀಗೆ 25 ತತ್ವಗಳಲ್ಲಿ 21ನೇ ಆಕಾಶತತ್ವದೇವತೆ ಯಾಗಿದ್ದಾನೆ. ಈ ಕಾರಣದಿಂದ 21 ಗರಿಕೆಗಳ ಅರ್ಚನಾ ಪ್ರಿಯನೀತ. ವಿಶ್ವಂಭರಮೂರ್ತಿಯ ಧರಿಸಿದಾತ.

ತನ್ನ ಕಾಂಡದಿಂದಲೇ ಜನಿಸಿ, ಒಂದು ನೂರಾಗಿ ಸಾವಿರವಾಗಬಲ್ಲ ಅನಂತ ವ್ಯಕ್ತಿತ್ವ ಸಂಕೇತವಾದ ಗರಿಕೆ ಹಾಗೂ ಕಬ್ಬುಗಳು ಗಣಪನಿಗೆ ಅತಿಪ್ರಿಯ. ಎಂದಿಗೂ ಎಂಜಲಿನಿಂದ ಹುಟ್ಟದ ತೆಂಗಿನಕಾಯಿ ಬಾಳೆಹಣ್ಣುಗಳು ಎಂದರೆ ಬಲು ಇಷ್ಟ. ಋಗ್ವೇದದಲ್ಲಿ ಗಣಾನಾಂ ತ್ವಾ ಗಣಪತಿಂ ಹವಾಮಹೇ ಎಂಬ ಋಕ್ಕು ಗಣಪತಿಯ ಪೂಜೆಯ ಮುಖ್ಯಮಂತ್ರ. ಗಣಪತಿ ಶಬ್ದಕ್ಕೆ ಬೃಹಸ್ಪತಿ ಅಥವಾ ಬ್ರಹ್ಮಣಸ್ಪತಿ ಎಂದೇ ಅರ್ಥೈಸಬಹುದು. ಇಂದು ಪ್ರಸಿದ್ಧವಿರುವ ಗಣಪತಿಯ ಮೂರ್ತಿಕಲ್ಪನೆ ಪುರಾಣಕಾಲದ್ದು. ಪುರಾಣಗಳಿಗೂ ಪೂರ್ವದ ಋಗ್ವೇದದಲ್ಲಿ ಆನೆಯ ಮುಖ, ಇಲಿಯ ವಾಹನ, ದೊಡ್ಡ ಹೊಟ್ಟೆ ಮುಂತಾದ ಪೌರಾಣಿಕ ಕಲ್ಪನೆಗಳಿಲ್ಲ. ಆತ ಗಣತಿ ಕೇವಲ ವಾಕ್(ಮಾತು) ಅಭಿಮಾನಿಯಾದ ದೇವರು ಎನ್ನಲಾಗುತ್ತಿತ್ತು. ಅಷ್ಟೇ ಅಲ್ಲದೆ ಇಡೀ ರಾಮಾಯಣದಲ್ಲಿ ಹಾಗೂ ಮಹಾಭಾರತದ ಮೂಲರೂಪದಲ್ಲಿ ಗಣಪತಿಯ ನಾಮಸ್ಮರಣೆ ಕೂಡ ಎಲ್ಲೂ ಇಲ್ಲ. ಮಹಾಕವಿ ಕಾಳಿದಾಸ ಸಹ ಗಣಪತಿಯ ಎಲ್ಲಿಯೂ ಎಲ್ಲ ರೂಪಗಳನ್ನು ವಿಶ್ಲೇಷಿಸಿಲ್ಲ. ಮಹಾಭಾರತ ಕೃತಿ ರಚನೆ ಮಾಡುವಾಗ ಭಗವಾನ್ ಶ್ರೀವೇದವ್ಯಾಸರು ಗಣೇಶನನ್ನು ಲಿಪಿಕಾರನನ್ನಾಗಿ ಮಾಡಿಕೊಂಡರು. ಇದಕ್ಕೂ ಮೊದಲು ಎಲ್ಲಿಯೂ ಗಣಪನ ಹೆಸರು ಕಂಡುಬಾರದು.

**ಗಣಪತಿ ಅವಿವಾಹಿತ:** ತಾಯಿ ಮೇಲೆ ಪ್ರೇಮದಿಂದಾಗಿ ಗಣಪ ಅವಿವಾಹಿತನಾಗಿ ಉಳಿದಿದ್ದಾನೆ. ಒಮ್ಮೆ ಬೀದಿಯಲ್ಲಿ ಆಟವಾಡುತ್ತಿದ್ದ ಬೆಕ್ಕನ್ನು ಗಾಯಗೊಳಿಸಿದ ಗಣಪ ಮನೆಗೆ ಬಂದಾಗ ತಾಯಿಯ ಶರೀರದ ಮೇಲೆ ಗಾಯವಾಗಿತ್ತು. ಏನಿದು ಎಂದಾಗ, ಇದು ನೀನು ಮಾಡಿದ ಗಾಯ ಎಂದಳು. ಇದರಿಂದ ಗಣಪನಿಗೆ ಆಶ್ಚರ್ಯವಾಯಿತು. ಆಗ ಪಾರ್ವತಿ ನಾನು ಎಲ್ಲ ಜೀವರಾಶಿಗಳಲ್ಲಿ ಅಂತರ್ಗತಳಾಗಿದ್ದೇನೆ ಎಂದಳು. ಬೆಕ್ಕನ್ನು ಗಾಯಗೊಳಿಸಿದಾಗ ಅವಳಿಗೇ ಘಾಸಿಯಾಗಿತ್ತು. ಇದರಿಂದ ಗಣೇಶನಿಗೆ ಸ್ತ್ರೀಯರೆಲ್ಲಾ ಅವನ ತಾಯಿಯ ಪ್ರತಿರೂಪವೆಂದು ಜ್ಞಾನೋದಯವಾಯಿತು. ಹಾಗಾಗಿ ಮದುವೆಯನ್ನು ನಿರಾಕರಿಸಿದ ಎನ್ನಲಾಗುತ್ತದೆ.

ಭಾರತೀಯ ಆಧ್ಯಾತ್ಮ ಪ್ರಪಂಚದಲ್ಲಿ ದ್ವೈತ, ವೈಷ್ಣವ, ಶಾಸ್ತ್ರೀಯ, ಗಾಣಪತ್ಯ, ಅದ್ವೈತ, ವಿಶಿಷ್ಟಾದ್ವೈತ ಪಂಥದವರೆಂಬ ಭೇದವಿಲ್ಲದೆ ವಿಶ್ವದೆಲ್ಲೆಡೆ ಸಮಸ್ತ ಹಿಂದುಗಳಿಗೆ ಗಣಪ ಪ್ರಥಮ ವಂದ್ಯ. ಹಾಗಾಗಿಯೇ ಗಣೇಶ ಪುರಾಣದಲ್ಲಿ ಶೈವೈಸ್ತ್ವತೀಯರಥ ವೈಷ್ಣವೈಶ್ಯ ಶಾಕ್ತೈಶ್ಚ ಸೌರೈರಥ ಶುಭಾಶುಭೇಲೌಕಿಕ ವೈದಿಕೇಚ ತ್ವರ್ಚನೀಯಃ ಪ್ರಥಮಂ ಪ್ರಯತ್ನಾತ್ ಎಂದು ಶ್ರೀವೇದವ್ಯಾಸರು ಗಣೇಶನ ಹೆಗ್ಗಳಿಕೆಯನ್ನು ಸಾರಿದ್ದಾರೆ.

ಲಿಂಗಪುರಾಣ, ಸ್ಕಾಂದಪುರಾಣ, ಭವಿಷ್ಯ ಪುರಾಣ, ಅಗ್ನಿಪುರಾಣ, ನಾರದ ಪುರಾಣ, ದೇವಿ ಭಾಗವತ ಪುರಾಣ, ಬ್ರಹ್ಮ ಪುರಾಣ, ಸೌರಪುರಾಣ, ಮುದ್ಗಲಪುರಾಣ, ಗರುಡ ಪುರಾಣಗಳಲ್ಲಿ ಗಣಪತಿಯನ್ನು ವರ್ಣಿಸಲಾಗಿದೆ. ಹದಿನೆಂಟನೆಯ ಕಕ್ಷೆಯಲ್ಲಿ ಬರುವ ಗಣಪತಿ ಇಷ್ಟೊಂದು ಪ್ರಖ್ಯಾತಿ ಪಡೆದು, ಸಿದ್ಧಿಯನ್ನು ಅನುಗ್ರಹಿಸಲು ಕಾರಣ ಅವನಲ್ಲಿರುವ ವಿಶ್ವ ಹಾಗು ತೈಜಸ ರ ಅನುಗ್ರಹದ ಜತೆಗೆ ಪ್ರಾಣಾವೇಶ. ಇದು ಗಣಪನನ್ನು ಇಷ್ಟೊಂದು ಪ್ರಖ್ಯಾತಗೊಳಿಸಿದೆ.


ಶ್ರೀಜಗನ್ನಾಥದಾಸರು ಹರಿಕಥಾಮೃತಸಾರ ಕೃತಿಯ ರಚನೆಯಲ್ಲಿ ತೊಡಗಿದಾಗ, 27 ಸಂಧಿಗಳು ಸುಗಮವಾಗಿ ಸಾಗಿ ನಂತರ ಮುಂದುವರಿಯದೆ ನಿಂತು ಹೋಯಿತಂತೆ. ಆಗ ಅವರ ಗುರುಗಳಾದ ಶ್ರೀಗೋಪಾಲದಾಸರಲ್ಲಿ ವಿಚಾರಿಸಿದಾಗ ಶ್ರೀ ಗಣಪತಿಸ್ತೋತ್ರವನ್ನು ಕೈಬಿಟ್ಟಿರುವುದರಿಂದ ಹೀಗಾಗಿದೆ ಎಂದು ತಿಳಿಸಿದರಂತೆ. ಈ ಕಾರಣದಿಂದಾಗಿ 28ನೇಯ ಸಂಧಿಯನ್ನು ಶ್ರೀ ವಿಘ್ನೇಶ್ವರಸಂಧಿ ಯೆಂದು ಕರೆದು ಗಣಪತಿಯ ಅಂತರ್ಗತ ಶ್ರೀ ವಿಶ್ವಂಭರ ಮೂರುತಿಗೆ ಅರ್ಪಿಸಿದಾಗ ಮುಂದಿನ ಕಾರ್ಯವು ನಿರ್ವಿಘ್ನವಾಗಿ ಸಾಗಿತಂತೆ.

**ವಿಶೇಷವೆಂದರೆ ಗಣಪತಿಯನ್ನು ಆರಾಧಿಸುವ(ಗಾಣಪತ್ಯ) ಆರು ಪಂಥಗಳಿವೆ.**

1. ಮಹಾಗಣಪತಿ; 2.ಹರಿದ್ರಾ ಗಣಪತಿ; 3. ಉಚ್ಛಿಷ್ಟ ಗಣಪತಿ; 4. ನವನೀತ ಗಣಪತಿ; 5. ಸ್ವರ್ಣ ಗಣಪತಿ ಮತ್ತು 6. ಸಂತಾನ ಗಣಪತಿ. ಈ ಆರು ವಿಧಾನಗಳಲ್ಲಿ ಆವಾಹನಾಮಂತ್ರ ಹಾಗೂ ಪೂಜಾ ವಿಧಿಗಳಲ್ಲಿ ಸಾಕಷ್ಟು ವ್ಯತ್ಯಾಸವಿದೆ. ಉಚ್ಛಿಷ್ಟ ಗಣಪತಿ ಪೂಜಾವಿಧಿ ಮಾತ್ರ ಅವೈದಿಕ ಹಾಗೂ ನಿಷಿದ್ಧವಾಗಿದೆ. ವಾಮಾಚಾರಿಗಳು ಪೂಜಿಸುವ ವಿಧಾನವಿದು. ಉಚ್ಛಿಷ್ಟವೆಂದರೆ ಎಂಜಲು. ಎಂಜಲು, ಮಾಂಸ, ಮದ್ಯ, ಮೈಥುನ ಇತ್ಯಾದಿ ವಾಮಾಚಾರಗಳ ಮೂಲಕ ಗಣಪನನ್ನು ಪೂಜಿಸುತ್ತಾರೆ. ಈ ಅತಿರೇಕವನ್ನು ರಹಸ್ಯತಾಂತ್ರಿಕ ಪಂಥದಲ್ಲಿ ಕಾಣಬಹುದು.

## ಶ್ರೀವರಸಿದ್ಧಿ ವಿನಾಯಕ ವ್ರತ

ಶೈವೈಸ್ತ್ವತೀಯರಥ ವೈಷ್ಣವೈಶ್ಯ ಶಾಕ್ತೈಶ್ಚ ಸೌರೈರಥ ಶುಭಾಶುಭೇಲೌಕಿಕ ವೈದಿಕೇಚ ತ್ವರ್ಚನೀಯಃ ಪ್ರಥಮಂ ಪ್ರಯತ್ನಾತ್ (ಶ್ರೀವೇದವ್ಯಾಸರು). ಭಾದ್ರಪದ ಮಾಸ ಶುಕ್ಲ ಪಕ್ಷದ ಚೌತಿ ಎಂದರೆ ಜನರಲ್ಲಿ ಏನೋ ಒಂದು ರೀತಿ ವಿಶೇಷವಾದ ಪುಳಕ. ಇದಕ್ಕೆ ಕಾರಣ, ದೇಶಾದ್ಯಂತ ಮತ, ಪಂಥ ಭೇದ ಮರೆತು ಆಚರಿಸುವ ಗಣಪನ ಹಬ್ಬ. ಮನೋನಿಯಾಮಕರಾದ ಶ್ರೀಮಹಾರುದ್ರದೇವರು ಹಾಗೂ ಮತಿ ಪ್ರೇರಕಳಾದ ಶ್ರೀಪಾರ್ವತಿ ದೇವಿಯರ ಮುದ್ದು ಮಗ ಗಣಪನನ್ನು ಯಥಾಮತಿ ಪೂಜಿಸಿ, ಅರ್ಚಿಸಿದರೆ ಅನಂತ ಗುಣಗಳ ಗಡಣ ಗರುಡಗಮನ ಕೈವಲ್ಯಮೂರ್ತಿ ಕರುಣಿಸುವನು ಎಂದು ದಾಸರಾದಿಯಾಗಿ ಋಷಿಗಳು ಕೊಂಡಾಡಿದ್ದಾರೆ. ಇಂತಹ ಗಣಪನ ಬಗ್ಗೆ ಒಂದಿಷ್ಟು ತಿಳಿದುಕೊಳ್ಳೋಣ. ಆದಿಪೂಜ್ಯೋ ವಿನಾಯಕಃ, ವಿಘ್ನಾನಿ ಹರಂತು ಸುರನಾಯಕ ಎಂದು ಕರೆಯಲಾಗುವ ಗಣಪನನ್ನು ಎಲ್ಲ ವ್ರತಗಳಿಗಿಂತ ಮೊದಲು ಪೂಜಿಸಿ ಪ್ರಾರ್ಥಿಸುವುದು ಕ್ರಮ. ಮೊದಲ ಪೂಜೆ ಸ್ವೀಕರಿಸುವ ಗಣಗಳ ಒಡೆಯ ಎಲ್ಲ ವಿಘ್ನಗಳನ್ನು ನಿವಾರಿಸಿ, ವ್ರತವಷ್ಟೇ ಅಲ್ಲದೆ ಎಲ್ಲ ಕೆಲಸಗಳಲ್ಲಿ ನಿರ್ವಿಘ್ನತೆಯನ್ನು ಕರುಣಿಸುತ್ತಾನೆ. ಇಂತಹ ಗಣಪನ ಹುಟ್ಟು ಹೇಗೆ ಎಂಬುದನ್ನು ಅರಿಯೋಣ.



## 16 ಗ್ರಂಥಿ(ಗಂಟು) ಹಾಕಬೇಕು. ಈ ದಾರಗಳನ್ನು ದೇವಿಯ ಮುಂದಿಟ್ಟು ಪೂಜಿಸಬೇಕು

ನಾನಾ ವಿಧವಾದ ಭಕ್ಷ್ಯಗಳನ್ನು ದೇವಿಗೆ ನೈವೇದ್ಯವಾಗಿ ಸಮರ್ಪಣೆ ಮಾಡಬೇಕು. ಚೆನ್ನಾಗಿ ಪಕ್ವವಾದ ಹಣ್ಣುಗಳನ್ನು ತಾಯಿಗೆ ಅರ್ಪಿಸಬೇಕು. ಮಹಾ ಮಂಗಳಾರತಿ ಮಾಡಿ ನಾನಾ ವಿಧವಾದ ಪತ್ರೆ, ಪುಷ್ಪಗಳನ್ನು ಸಮರ್ಪಿಸಿ, ನಮಿಸಿ ತಾಯಿಯನ್ನು ಬೇಡಬೇಕು. ನಂತರ ದೇವದೇವ ಸಮಾಗಚ್ಛ ಪ್ರಾರ್ಥಯೇಅಹಂ ಜಗತ್ಪತೇ ಇಮಾಂ ಮಯಾ ಕೃತಾಂ ಪೂಜಾಂ ಗೃಹಾಣ ಸುರಸತ್ತಮ॥ ಎಂದು ಪ್ರಾರ್ಥಿಸಬೇಕು. ಇದಾದ ಮೇಲೆ ದಾರವನ್ನು ತೆಗೆದುಕೊಂಡು ಪಾರ್ವತೀಶಂಕರೌ ಪೂಜ್ಯೌ ಭಕ್ತ್ಯಾ ಪರಮಯಾ ಮುದಾ। ದೋರಕಂ ಷೋಡಶಗುಣಂ ಬಧ್ನೀಯಾದ್ ದಕ್ಷಿಣ ಕರೇ॥ ಎಂದು ದಾರವನ್ನು ಕಟ್ಟಿಕೊಳ್ಳಬೇಕು. ನಂತರ ವಿಪ್ರರಿಗೆ ವಾಯನದಾನ ಹಾಗೂ ಸುಮಂಗಲಿಯರಿಗೆ ಬಾಗಿನ ನೀಡಿ, ಅವರ ಆಶೀರ್ವಾದ ಬೇಡಿ ಪಡೆಯಬೇಕು. ಜಯ ದೇವೀ ನಮಸ್ತುಭ್ಯಂ ಜಯ ಭಕ್ತವರಪ್ರದೇ। ಜಯ ಶಂಕರವಾಮಾಂಗೇ ಜಯ ಮಂಗಲ ಮಂಗಲೇ॥ ಸರ್ವರಿಗೂ ದೇವಿಯ ಅನುಗ್ರಹ ದೊರೆಯಲೆಂದು ಈ ಮೂಲಕ ಪ್ರಾರ್ಥಿಸುತ್ತೇನೆ.

ಸತ್ಯದ ಹಾದಿ | ಜನಪರ ದನಿ | ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ
ಸೆಪ್ಟಂಬರ್, 13- 2026
ಭಾನುವಾರ

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481


# ನಾಲ್ಕು ದಿನ 21 ಜಿಲ್ಲೆಗಳಲ್ಲಿ ಸಾಧಾರಣ ಮಳೆ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದಲ್ಲಿ ಮುಂದಿನ ನಾಲ್ಕು ದಿನಗಳ ಕಾಲ 21 ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ನೈಋತ್ಯ ಮುಂಗಾರು ದುರ್ಬಲಗೊಂಡಿದ್ದರೂ, ದಕ್ಷಿಣ ಒಳನಾಡು, ಮಲೆನಾಡು ಹಾಗೂ ಕರಾವಳಿ ಭಾಗಗಳಲ್ಲಿ ವಾತಾವರಣದಲ್ಲಿ ಬದಲಾವಣೆಯಾಗಿದ್ದು, ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದೆ.



ದಕ್ಷಿಣ ಒಳನಾಡು ಮತ್ತು ಮಲೆನಾಡಿನ 12 ಜಿಲ್ಲೆಗಳಾದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಮಂಡ್ಯ, ಮೈಸೂರು, ತುಮಕೂರು, ಹಾಸನ, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಕೊಡಗು ಜಿಲ್ಲೆಗಳ ಕೆಲವು ಭಾಗಗಳಲ್ಲಿ ಗುಡುಗು ಮತ್ತು ಬಿರುಗಾಳಿ ಸಹಿತ (ಗಂಟೆಗೆ 30–40 ಕಿ.ಮೀ ವೇಗ) ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಸೂಚನೆ ನೀಡಿದೆ.

ಕರಾವಳಿಯ 3 ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಉತ್ತರ ಒಳನಾಡಿನ 6 ಜಿಲ್ಲೆಗಳಾದ ಬೆಳಗಾವಿ, ಧಾರವಾಡ, ಗದಗ, ಬೀದರ್, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಹಗುರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ವರದಿ ಹೇಳಿದೆ.

ಉಳಿದಂತೆ ಬಾಗಲಕೋಟೆ, ವಿಜಯಪುರ, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ, ದಾವಣಗೆರೆ, ಚಿತ್ರದುರ್ಗ ಹಾಗೂ ಹಾವೇರಿ ಸೇರಿದಂತೆ 10 ಜಿಲ್ಲೆಗಳಲ್ಲಿ ಪ್ರಮುಖವಾಗಿ ಒಣಹವೆ ಮುಂದುವರಿಯಲಿದೆ.

ಇನ್ನು ರಾಜಧಾನಿ ಬೆಂಗಳೂರಿನಲ್ಲಿ ಮುಂದಿನ ನಾಲ್ಕು ದಿನ ಆಕಾಶವು ಭಾಗಶಃ ಮೋಡಕವಿದಂತಿರಲಿದೆ. ಸಂಜೆ ಅಥವಾ ರಾತ್ರಿಯ ವೇಳೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ತಾಪಮಾನವು ಗರಿಷ್ಠ 31ಲಿಅ ಮತ್ತು ಕನಿಷ್ಠ 21ಲಿಅ ಆಸುಪಾಸಿನಲ್ಲಿರಲಿದೆ.

# ರಾಮನಗರ ಕಾಲೇಜಿನ 46 ವಿದ್ಯಾರ್ಥಿಗಳ ಉತ್ತರ ಪತ್ರಿಕೆ ನಾಪತ್ತೆ



● ವಿಕ್ರಮ ವಾಹಿನಿ | ಬೆಂಗಳೂರು

ರಾಮನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಬಿ.ಕಾಂ. ದ್ವಿತೀಯ ಸೆಮಿಸ್ಟರ್‌ನ 46 ವಿದ್ಯಾರ್ಥಿಗಳ 'ಆಧುನಿಕ ಬ್ಯಾಂಕಿಂಗ್' ವಿಷಯದ ಉತ್ತರ ಪತ್ರಿಕೆಗಳು ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ನಾಪತ್ತೆಯಾಗಿರುವುದು ಬೆಳಕಿಗೆ ಬಂದಿದೆ. 2025ರ ಜನವರಿಯಲ್ಲಿ ಪರೀಕ್ಷೆ ಬರೆದಿದ್ದ ವಿದ್ಯಾರ್ಥಿಗಳು ಒಂದೂವರೆ ವರ್ಷದಿಂದ ಫಲಿತಾಂಶಕ್ಕಾಗಿ ಕಾಯುತ್ತಿದ್ದಾರೆ.

ಉಳಿದ ವಿದ್ಯಾರ್ಥಿಗಳ ಫಲಿತಾಂಶವನ್ನು ಮಾರ್ಚ್ 2025ರಲ್ಲೇ ಪ್ರಕಟಿಸಲಾಗಿತ್ತು. ಫಲಿತಾಂಶ ವಿಳಂಬವಾದ ಹಿನ್ನೆಲೆಯಲ್ಲಿ ಕಾಲೇಜು ಪ್ರಾಂಶುಪಾಲರು ವಿಶ್ವವಿದ್ಯಾಲಯಕ್ಕೆ ಜ್ಞಾಪನಾ ಪತ್ರ ಸಲ್ಲಿಸಿದ ಬಳಿಕ ಉತ್ತರ ಪತ್ರಿಕೆಗಳು ನಾಪತ್ತೆಯಾಗಿರುವುದು ಗೊತ್ತಾಗಿದೆ.

ಪ್ರಕರಣ ಕುರಿತು ಸಿಂಡಿಕೇಟ್ ಸಭೆಯಲ್ಲಿ ಚರ್ಚೆ ನಡೆದಿದ್ದು, ವಿದ್ಯಾರ್ಥಿಗಳಿಗೆ ಅನ್ಯಾಯವಾಗದಂತೆ ಇತರ ವಿಷಯಗಳಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ನಾಪತ್ತೆಯಾದ ವಿಷಯದ ಅಂಕಗಳನ್ನು ಲೆಕ್ಕಹಾಕಿ ಫಲಿತಾಂಶ ಪ್ರಕಟಿಸಲು ನಿರ್ಧರಿಸಲಾಗಿದೆ. ಕರ್ತವ್ಯಲೋಪದ ಹಿನ್ನೆಲೆಯಲ್ಲಿ ಪರೀಕ್ಷಾ ಉಸ್ತುವಾರಿ, ಸಿಸ್ಟಮ್ಸ್ ಎಂಜಿನಿಯರ್ ಹಾಗೂ ಪ್ರಾಂಶುಪಾಲರಿಗೆ ನೋಟಿಸ್ ನೀಡಲು ತೀರ್ಮಾನಿಸಲಾಗಿದೆ.

ಉತ್ತರ ಪತ್ರಿಕೆಗಳನ್ನು ಪತ್ತೆಹಚ್ಚಲು ಸಿಸ್ಟಮ್ ಮ್ಯಾನೇಜರ್‌ಗೆ ನೋಟಿಸ್ ನೀಡಲಾಗಿದ್ದು, ವಿಫಲರಾದರೆ ಪೊಲೀಸರಿಗೆ ದೂರು ನೀಡಲಾಗುವುದು ಎಂದು ಕುಲಪತಿ ಸಿ.ಶಿವರಾಜು ತಿಳಿಸಿದ್ದಾರೆ. ಉತ್ತರ ಪತ್ರಿಕೆಗಳು ನಾಪತ್ತೆಯಾದ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಸಿಂಡಿಕೇಟ್ ಸದಸ್ಯರು ಆಗ್ರಹಿಸಿದ್ದಾರೆ.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಶೀಘ್ರ ಫಲಿತಾಂಶ ಪ್ರಕಟಿಸಿ, ಉತ್ತರ ಪತ್ರಿಕೆಗಳ ನಾಪತ್ತೆಗೆ ಕಾರಣರಾದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗಿದೆ. ಉತ್ತರ ಪತ್ರಿಕೆಗಳ ಸುರಕ್ಷತೆ ಮತ್ತು ಪರೀಕ್ಷಾ ವ್ಯವಸ್ಥೆಯಲ್ಲಿನ ಲೋಪಗಳನ್ನು ಪರಿಶೀಲಿಸಿ, ಮುಂದೆ ಇಂತಹ ಘಟನೆಗಳು ಮರುಕಳಿಸದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಆಗ್ರಹಿಸಲಾಗಿದೆ.

2013ರಿಂದ 2023ರ ಅವಧಿಯಲ್ಲೂ 97 ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳು ನಾಪತ್ತೆಯಾಗಿ ಫಲಿತಾಂಶ ತಡೆಹಿಡಿಯಲಾಗಿತ್ತು. ಮತ್ತೆ ಇಂತಹ ಘಟನೆ ಮರುಕಳಿಸಿರುವುದು ವಿಶ್ವವಿದ್ಯಾಲಯದ ಪರೀಕ್ಷಾ ವ್ಯವಸ್ಥೆಯಲ್ಲಿನ ಲೋಪದ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಡಿಜಿಟಲ್ ಮೌಲ್ಯಮಾಪನಕ್ಕೆ ಅನುಮತಿ ಪಡೆಯದೆ ಬೇರೆ ತಂತ್ರಾಂಶ ಬಳಸಿರುವ ಆರೋಪವೂ ಕೇಳಿಬಂದಿದ್ದು, ಈ ಬಗ್ಗೆಯೂ ತನಿಖೆಗೆ ಒತ್ತಾಯಿಸಲಾಗಿದೆ.

# ಅತಿ ಶೀತ ಅಥವಾ ಉಷ್ಣ ನೀರು ಸೇವನೆ ಆರೋಗ್ಯಕ್ಕೆ ಹಾನಿಕರ: ರಾಘವೇಶ್ವರ ಶ್ರೀ

● ವಿಕ್ರಮ ವಾಹಿನಿ | ಗೋಕರ್ಣ

ಅತಿ ಉಷ್ಣ ಹಾಗೂ ಅತಿ ಶೀತ ಜಲ ಎರಡನ್ನೂ ಸೇವಿಸಬಾರದು ಎಂದು ಆಯುರ್ವೇದದಲ್ಲಿ ಉಲ್ಲೇಖಿತವಾಗಿದೆ. ದೇಹದಲ್ಲಿ ಒಂದೇ ಬಾರಿಗೆ ಶೀತ ಅಥವಾ ಉಷ್ಣಗಳು ಬದಲಾದರೆ ಅದು ದೇಹದ ಮೇಲೆ ವ್ಯತಿರಿಕ್ತ ಪರಿಣಾಮವನ್ನು ಉಂಟುಮಾಡುತ್ತದೆ. ದೇಹದಲ್ಲಿ ತಂಪಾಗಲಿ, ಉಷ್ಣವಾಗಲಿ ಹಂತಹಂತವಾಗಿ ಬದಲಾಗಬೇಕು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.




ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 12.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ನೀರಿನ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ನಾವಿಂದು ತತ್ಕ್ಷಣಕ್ಕೆ ಹಾಯೆನಿಸುತ್ತದೆ ಎಂದು ನೀರನ್ನು ತಂಪಿನ ಪೆಟ್ಟಿಗೆ (ಫ್ರಿಡ್ಜ್) ಯಲ್ಲಿ ಇಟ್ಟು ಅತೀ ಶೀತ ನೀರನ್ನು ಸೇವಿಸುವ ಪರಿಪಾಠವನ್ನು ಬೆಳಸಿಕೊಂಡಿದ್ದೇವೆ. ಅದು ದೇಹಕ್ಕೆ ಹಾಳು ಎಂದು ಆಯುರ್ವೇದವೂ ಸೂಚಿಸಿದೆ ಮತ್ತು ಆಧುನಿಕ ವಿಜ್ಞಾನವೂ ಹೇಳಿದೆ. ಆಯುರ್ವೇದದ ಪ್ರಕಾರ ಅತಿ ಶೀತ ನೀರು ಜೀರ್ಣಕ್ಕೆ ಭಾರ, ಜೀರ್ಣಾಗ್ನಿಯನ್ನು ಹಾಳುಮಾಡುತ್ತದೆ, ವಾತ ಹಾಗೂ ಕಫಗಳನ್ನು ವಿಕಾರಗೊಳಿಸುತ್ತದೆ, ವಿವಿಧ ರೋಗಗಳಿಗೆ ಕಾರಣವಾಗುತ್ತದೆ ಎನ್ನಲಾಗಿದ್ದು, ಇಂದಿನ ವಿಜ್ಞಾನವೂ ರೋಗ ಹಾಗೂ ರಕ್ತನಾಳಗಳ ಸಂಕುಚಿತವನ್ನು ಹೇಳಿದೆ ಎಂದು ಎಚ್ಚರಿಸಿದರು.

ವಿವಿಧ ಹೂವುಗಳನ್ನು ನೀರಿಗೆ ಹಾಕಿಕೊಂಡು ಸುಗಂಧ ಭರಿತವಾದ ನೀರನ್ನು ಸೇವಿಸುವ ಕುರಿತಾಗಿಯೂ ಮಾಹಿತಿಗಳಿದ್ದು, ಚಿನ್ನ, ಬೆಳ್ಳಿ, ತಾಮ್ರ, ಗಾಜು, ಮಣ್ಣು ಮುಂತಾದ ಉತ್ತಮ ಪಾತ್ರೆಗಳಲ್ಲಿ ನೀರನ್ನು ಸೇವಿಸಬೇಕು. ಇಂದಿನ ಸ್ಟೀಲ್ ಲೋಟಗಳು ನೀರಿನ ಸೇವನೆಗೆ ವರ್ಜ್ಯ ಎಂದು ವಿವರಿಸಿದರು.

ಕರ್ನಾಟಕ ವಿಧಾನಸಭೆಯ ಉಪಸಭಾಧ್ಯಕ್ಷ ಮಂಕಾಳ ವೈದ್ಯ ಕುಟುಂಬದವರು ಮತ್ತು ಕುಮಟಾ ಶಾಸಕ ದಿನಕರ ಶೆಟ್ಟಿ ಮುಂತಾದವರು ಉಪಸ್ಥಿತರಿದ್ದು, ಶ್ರೀಗಳಿಂದ ಆಶೀರ್ವಾದ ಪಡೆದರು. ಬೆಂಗಳೂರು ಉತ್ತರ ಹವ್ಯಕ ಮಂಡಲದ ಪರವಾಗಿ ಕೇಶವ ಭಟ್ ಸರ್ಪಂಗಳ ಕುಟುಂಬದವರು ಭಿಕ್ಷಾಸೇವೆ ಸಮರ್ಪಿಸಿದರು. ದಿನಪ್ರಧಾನರಾಗಿ ಶಿವರಾಮ ಭಟ್ಟ ಬುರ್ಡೆ ದಂಪತಿಗಳು ಉಪಸ್ಥಿತರಿದ್ದರು.

**ನವರಾತ್ರ ಆಹ್ವಾನ ಪತ್ರಿಕೆ ಲೋಕಾರ್ಪಣೆ:**

ಈ ವರ್ಷದ ನವರಾತ್ರಿಯ ಕಾರ್ಯಕ್ರಮಗಳು ಬೆಂಗಳೂರಿನ ಗಿರಿನಗರದಲ್ಲಿರುವ ಶ್ರೀಮಠದ ಶಾಖೆಯಲ್ಲಿ ನಡೆಯಲಿದ್ದು, ಶ್ರೀಗಳ ಸಾನ್ನಿಧ್ಯದಲ್ಲಿ "ನವರಾತ್ರ ನಮಸ್ಯಾ" ಎಂಬ ಹೆಸರಿನೊಂದಿಗೆ ಅಕ್ಟೋಬರ್ 11 ರಿಂದ ಅಕ್ಟೋಬರ್ 21 ರವರೆಗೆ ಮಹಾನಗರದಲ್ಲಿ ಮಹಾದೇವಿಯ ಮಹಾರಾಧನೆ ಸಂಪನ್ನವಾಗಲಿದೆ. ದೇವಿಯ ಆರಾಧನೆಯ ಜೊತೆಗೆ ವೈವಿಧ್ಯಮಯ ಕಾರ್ಯಕ್ರಮಗಳು ನಡೆಯಲಿವೆ. ಪೂಜ್ಯ ಶ್ರೀಗಳು ಆಹ್ವಾನ ಪತ್ರಿಕೆಯನ್ನು ಲೋಕಾರ್ಪಣೆ ಮಾಡಿ ಆಶೀರ್ವದಿಸಿದರು. ಶಾಸನತಂತ್ರದ ಅಧ್ಯಕ್ಷ ಮೋಹನ ಭಾಸ್ಕರ ಹೆಗಡೆ, ವಿತ್ತಾಧ್ಯಕ್ಷ ಗಣೇಶ್ ಜೆ.ಎಲ್, ಮಹಾಮಂಡಲದ ಕಾರ್ಯದರ್ಶಿ ಮಹೇಶ್ ಚಟ್ನಳ್ಳಿ, ರಮೇಶ್ ಹೆಗಡೆ ಕೋರಮಂಗಲ, ವಾದಿರಾಜ ಸಾಮಗ, ತಿಮ್ಮಪ್ಪ ಗುಡ್ಡೆದಿಂಬ ಉಪಸ್ಥಿತರಿದ್ದರು.

# ಐಮಂಗಲ ವಸತಿ ಶಾಲೆಯಲ್ಲಿ ಪಿಯು ಶಿಕ್ಷಣ ಆರಂಭಕ್ಕೆ ಕ್ರಮ



● ವಿಕ್ರಮ ವಾಹಿನಿ | ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಐಮಂಗಲ ಗ್ರಾಮದ ಹತ್ತಿರದ ಕಿತ್ತೂರು ರಾಣಿ ಚೆನ್ನಮ್ಮ ವಸತಿಶಾಲೆಗೆ ಶನಿವಾರ ಸಮಾಜ ಕಲ್ಯಾಣ ಸಚಿವ ಕೆ.ಹೆಚ್. ಮುನಿಯಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಎಸ್.ಎಸ್.ಎಲ್.ಸಿ ಓದುತ್ತಿರುವ ವಿದ್ಯಾರ್ಥಿನಿಯರಿಗೆ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗುವಂತೆ ಕಿವಿಮಾತು ಹೇಳಿದ ಸಚಿವರು, ವಸತಿ ಶಾಲೆಯಲ್ಲಿ ಪಿ.ಯು. ಶಿಕ್ಷಣ ಆರಂಭಿಸುವ ಭರವಸೆಯನ್ನು ನೀಡಿದರು.

"ಬಡತನದ ಹಿನ್ನೆಲೆ ಹೊಂದಿರುವ ಮಕ್ಕಳೇ ಇಲಾಖೆಯ ವಸತಿ ಶಾಲೆಯಲ್ಲಿ ಓದುವುದು. ನಿಮ್ಮ ತಂದೆ ತಾಯಂದಿರಿಗೆ ಲಕ್ಷಾಂತರ ರೂಪಾಯಿ ಖರ್ಚು ಮಾಡುವ ಆರ್ಥಿಕ ಚೈತನ್ಯವಿಲ್ಲ. ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ಪಾಸಾಗಿ, ನೀಟ್ ಹಾಗೂ ಸಿಇಟಿ ಮೂಲಕ ಸರ್ಕಾರಿ ಕೋಟಾದಡಿ ವೈದ್ಯಕೀಯ ಹಾಗೂ ಇಂಜಿನಿಯರ್ ಸೀಟನ್ನು ಪಡೆಯುವ ಲಕ್ಷ್ಯ ಹೊಂದಬೇಕು. ಇದರೊಂದಿಗೆ ಸ್ಪರ್ಧಾತ್ಮಕ ಪರೀಕ್ಷೆಯ ಎದುರಿಸಿ ಐ.ಎ.ಎಸ್, ಐ.ಪಿ.ಎಸ್ ಹಾಗೂ ಕೆ.ಎ.ಎಸ್ ಅಧಿಕಾರಿಗಳಾಗಿ ಸೇವೆ ಮಾಡುವ ಕನಸುಗಳನ್ನು ಕಾಣುವಂತೆ" ವಿದ್ಯಾರ್ಥಿನಿಯರಿಗೆ ಸಚಿವ ಕೆ.ಹೆಚ್. ಮುನಿಯಪ್ಪ ಪ್ರೇರಣೆ ನೀಡಿದರು.

ಅಧಿಕಾರಿಗಳು ಕಚೇರಿ ಕೆಲಸಗಳಿಗೆ ಸೀಮಿತವಾಗಬಾರದು. ಪ್ರತಿನಿತ್ಯ ಒಂದು ವಸತಿಶಾಲೆ ಅಥವಾ ನಿಲಯಗಳಿಗೆ ಭೇಟಿ ನೀಡಿ ಪರಿಶೀಲನಾ ವರದಿ ನೀಡುವಂತೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಲ್ಲಿಕಾರ್ಜುನ್ ಅವರಿಗೆ ಸಚಿವ ಕೆ.ಹೆಚ್.ಮುನಿಯಪ್ಪ ತಾಕೀತು ಮಾಡಿದರು.

ಈ ಕುರಿತು ಇಲಾಖೆ ಆಯುಕ್ತರಿಂದ ಸುತ್ತೋಲೆ ಹೊರಡಿಸಲಾಗುವುದು. ವಸತಿಶಾಲೆ ಹಾಗೂ ನಿಲಯಗಳಲ್ಲಿ ಅಧಿಕಾರಿ ಪರಿಶೀಲಿಸಬೇಕಾದ ತಪಸೀಲು ಪಟ್ಟಿಯನ್ನು ಸಹ ಸುತ್ತೋಲೆಯೊಂದಿಗೆ ನೀಡಲಾಗುವುದು. ವಸತಿ ನಿಲಯ ಅಥವಾ ಶಾಲೆ ಮುಖ್ಯಸ್ಥರಿಗೆ ಯಾವುದೇ ಸುಳಿವು ನೀಡದೆ, ಅನಿರೀಕ್ಷಿತವಾಗಿ ಭೇಟಿ ನೀಡಬೇಕು. ಕಡ್ಡಾಯವಾಗಿ ವಾರಕ್ಕೆ ಒಂದು ದಿನ ಜಿಲ್ಲಾಧಿಕಾರಿ ಹಾಗೂ ಸಿಇಓಗಳು ಸಹ ಪರಿಶೀಲನೆ ನಡೆಸಬೇಕು ಎಂದು ಸಚಿವ ಕೆ.ಹೆಚ್.ಮುನಿಯಪ್ಪ ಸೂಚಿಸಿದರು.

ಐಮಂಗಲ ಬಹುಗ್ರಾಮ ಕುಡಿಯುವ ನೀರಿನ ಯೋಜನಯಿಂದ ವಸತಿ ಶಾಲೆ ನೀರು ಸರಬರಾಜು ಮಾಡಲು ವಿದ್ಯಾರ್ಥಿನಿಯರು ಮನವಿ ಮಾಡಿದರು.

ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವ ಕೆ.ಹೆಚ್. ಮುನಿಯಪ್ಪನವರು ಪೈಪ್ ಲೈನ್ ಕಾಮಗಾರಿ ಯೋಜನಾ ವರದಿಯನ್ನು ಸಿದ್ದಪಡಿಸುವಂತೆ ಸಿಇಓಗೆ ಸೂಚಿಸಿದರು. ಕಾಮಗಾರಿ ತಗಲು ವೆಚ್ಚಕ್ಕೆ ಇಲಾಖೆಯಿಂದ ಅನುದಾನ ನೀಡುವುದಾಗಿ ತಿಳಿಸಿದರು. ಇದೇ ವೇಳೆ ವಸತಿ ಶಾಲೆಯ ಬೋದನಾ ಕೊಠಡಿ, ಪ್ರಯೋಗಾಲಯ, ಡಾರ್ಮೆಂಡರ್, ಭೋಜನಾಲಯಗಳಿಗೆ ಸಚಿವರು ಭೇಟಿ ನೀಡಿ ಪರಿಶೀಲಿಸಿದರು.

ಈ ವೇಳೆ ಬಹಳ ವರ್ಷಗಳಿಂದ ವಸತಿ ಶಾಲೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಖಾಯಂ ಗೊಳಿಸಲು ಅಡುಗೆ ಸಿಬ್ಬಂದಿ ಸಚಿವರಲ್ಲಿ ಮನವಿ ಮಾಡಿದರು.

ಇಲಾಖೆಯಲ್ಲಿನ ಖಾಯಂ ಅಡುಗೆ ಸಿಬ್ಬಂದಿಗೆ ಸೇವಾ ಹಿರಿತನದ ಆಧಾರದಲ್ಲಿ ಬಡ್ತಿ ನೀಡಲಾಗುತ್ತದೆ. ನಂತರ ಭರ್ತಿ ಮಾಡುವ ಹುದ್ದೆಗಳಲ್ಲಿ ಕ್ರೈಸ್ ಅಡಿ ಈಗಾಗಲೇ ಕೆಲಸ ಮಾಡುವ ಅಡುಗೆ ಸಿಬ್ಬಂದಿಗೆ ಆದ್ಯತೆ ನೀಡಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಸದ್ಯ ಇರುವ ವಸತಿ ಶಾಲೆಯ ಕಟ್ಟದ ಮೇಲ್ಭಾಗದಲ್ಲಿಯೇ ಇನ್ನಷ್ಟು ಕೊಠಡಿಗಳನ್ನು ನಿರ್ಮಿಸಿ ಪಿ.ಯು. ಶಿಕ್ಷಣ ಆರಂಭಿಸಲು ಯೋಜನೆಯೊಂದನ್ನು ಸಿದ್ದಪಡಿಸಿ ಇಲಾಖೆ ಪ್ರಸ್ತಾವನೆ ಸಲ್ಲಿಸುವಂತೆ ವಸತಿ ಶಾಲೆ ಪ್ರಾಂಶುಪಾಲರಿಗೆ ಸಚಿವ.ಕೆ.ಹೆಚ್.ಮುನಿಯಪ್ಪ ಸೂಚಿಸಿದರು.

ವಸತಿ ಶಾಲೆಯ ಕಾರ್ಯವೈಖರಿಗೆ ಮೆಚ್ಚುಗೆ ಸೂಚಿಸಿದ ಅವರು, ಎಲ್ಲಾ ವಿದ್ಯಾರ್ಥಿಗಳನ್ನು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣ ಮಾಡುವ ಗುರಿಯನ್ನು ಪ್ರಾಂಶುಪಾಲರಿಗೆ ನೀಡಿ, ಗಣ್ಯರ ಭೇಟಿ ಪುಸ್ತಕದಲ್ಲಿ ಸಹಿ ಮಾಡಿದರು. ಭೇಟಿ ನೆನಪಿಗಾಗಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಸಚಿವರೊಂದಿಗೆ ಫೋಟೋ ತೆಗೆಸಿಕೊಂಡರು.

ಈ ವೇಳೆ ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎಸ್. ಆಕಾಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಲ್ಲಿಕಾರ್ಜುನ್, ವಸತಿ ಶಾಲೆ ಪ್ರಾಂಶುಪಾಲ ಆರ್. ರಮೇಶ್ ಸೇರಿದಂತೆ ಮತ್ತಿತರರಿದ್ದರು

# ಹಿರಿಯೂರು ತಾಲ್ಲೂಕು ಮಟ್ಟದ ಭವನಗಳಿಗೆ ರೂ 4 ಕೋಟಿ ಅನುದಾನ

● ವಿಕ್ರಮ ವಾಹಿನಿ | ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ವಿವಿಧ ಸಮುದಾಯಗಳ ಭವನ ನಿರ್ಮಾಣಕ್ಕೆ ಬಾಕಿ ಇರುವ ಬೇಡಿಕೆಗಳನ್ನು ಈಡೇರಿಸಲಾಗುವುದು. ತಾಲ್ಲೂಕು ಮಟ್ಟದ ಭವನಗಳಿಗೆ ರೂ 4 ಕೋಟಿ ಹಾಗೂ ಹೋಬಳಿ ಮಟ್ಟದ ಯೋಜನೆಗಳಿಗೆ ತಲಾ ರೂ 75 ಲಕ್ಷ ಅನುದಾನ ಒದಗಿಸಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು.




ಹಿರಿಯೂರಿನ ಪ್ರವಾಸಿ ಮಂದಿರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಗತ್ಯವಿರುವ ಸುಮಾರು 20 ಪಂಚಾಯಿತಿಗಳಲ್ಲಿ ಅಂಬೇಡ್ಕರ್ ಭವನ ಸೇರಿದಂತೆ ವಿವಿಧ ಸಮುದಾಯ ಭವನಗಳನ್ನು ತಲಾ ರೂ 20 ಲಕ್ಷ ವೆಚ್ಚದಲ್ಲಿ ನಿರ್ಮಿಸಲು ತೀರ್ಮಾನಿಸಲಾಗಿದೆ ಎಂದರು.

ಹಿರಿಯೂರಿನಲ್ಲಿ ಹಿಂದಿನ ಸಚಿವ ಡಿ.ಸುಧಾಕರ್ ಅವಧಿಯಲ್ಲಿ ರೂಪಿಸಲಾಗಿದ್ದ ಅಪೂರ್ಣ ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಲಾಗುವುದು. ಸಮಾಜ ಕಲ್ಯಾಣ ಇಲಾಖೆಯ ಅಪೂರ್ಣ ಕಾಮಗಾರಿಗಳ ಜತೆಗೆ ಹಳೆಯ ವಸತಿಶಾಲೆಗಳ ಸುಧಾರಣೆ ಹಾಗೂ ನವೀಕರಣಕ್ಕೆ ಕ್ರಮ ಕೈಗೊಳ್ಳಲಾಗುವುದು. ಕ್ಷೇತ್ರಕ್ಕೆ ಹೊಸದಾಗಿ ಒಂದೆರಡು ವಸತಿಶಾಲೆಗಳನ್ನು ಮಂಜೂರು ಮಾಡುವ ಬಗ್ಗೆಯೂ ಪರಿಶೀಲಿಸಲಾಗುತ್ತಿದೆ ಎಂದು ಹೇಳಿದರು.

ನಿರ್ಮಾಣ ಹಂತದಲ್ಲಿರುವ ಜಗಜೀವನ್ ರಾಮ್ ಭವನ ಸೇರಿದಂತೆ ಇಲಾಖೆಯ ಕಟ್ಟಡಗಳ ಸ್ಥಿತಿಗತಿ ಪರಿಶೀಲಿಸಿ ಶೀಘ್ರ ಅನುದಾನ ಬಿಡುಗಡೆ ಮಾಡಲಾಗುವುದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಯಾದವ, ಒಕ್ಕಲಿಗ ಹಾಗೂ ಅಲ್ಪಸಂಖ್ಯಾತರು ಸೇರಿದಂತೆ ಎಲ್ಲ ಸಮುದಾಯಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದರು.

**ಯುವಜನರಿಗೆ ರೂ 10 ಲಕ್ಷದವರೆಗೆ ಅನುದಾನ**

ಯುವಜನರನ್ನು ಕ್ರೀಡೆ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಲು 'ಭಾರತ್ ಜೋಡೋ ಸಂಘ'ಗಳ ಮೂಲಕ ಪ್ರತಿ ಪಂಚಾಯಿತಿಗೆ ರೂ 10 ಲಕ್ಷದವರೆಗೆ ಅನುದಾನ ಮೀಸಲಿಡಲಾಗಿದೆ. ಯುವಕರಿಗೆ ತರಬೇತಿ ಹಾಗೂ ಪ್ರೋತ್ಸಾಹ ನೀಡಿ ತಾಲೂಕು, ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಸಾಧನೆಗೆ ಸಜ್ಜುಗೊಳಿಸಲಾಗುವುದು ಎಂದರು.

**ಮನೆ ಬಾಗಿಲಿಗೆ ಆಡಳಿತ**

ಜನರ ಸಮಸ್ಯೆಗಳನ್ನು ಸ್ಥಳದಲ್ಲೇ ಆಲಿಸಿ ಪರಿಹರಿಸುವ ಉದ್ದೇಶದಿಂದ ಜಿಲ್ಲಾ ಉಸ್ತುವಾರಿ ಸಚಿವರು ತಿಂಗಳ ಮೊದಲ ಹಾಗೂ ಮೂರನೇ ಶನಿವಾರ ತಾಲೂಕು ಮತ್ತು ಗ್ರಾಮೀಣ ಪ್ರದೇಶಗಳಿಗೆ ಭೇಟಿ ನೀಡುತ್ತಿದ್ದಾರೆ. ಅಧಿಕಾರಿಗಳ ತಂಡದೊಂದಿಗೆ ಮನೆ ಬಾಗಿಲಿಗೆ ತೆರಳಿ ಸೈಟು, ಮನೆ, ಖಾತೆ ಹಾಗೂ ಸಾಲ ಸೌಲಭ್ಯ ಸೇರಿದಂತೆ ವಿವಿಧ ಅರ್ಜಿಗಳನ್ನು ಸ್ವೀಕರಿಸಿ ಕಾಲಮಿತಿಯಲ್ಲಿ ಪರಿಹರಿಸಲಾಗುತ್ತಿದೆ ಎಂದರು.

**ಸೆ.15ರಿಂದ 'ಯುವ ಸಂಸತ್'**

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಸೆ.15ರಿಂದ ನ.26ರ ಸಂವಿಧಾನ ದಿನದವರೆಗೆ ರಾಜ್ಯಾದ್ಯಂತ 'ಯುವ ಸಂಸತ್' ಕಾರ್ಯಕ್ರಮ ಆಯೋಜಿಸಲಾಗುವುದು. ಯುವಜನರಿಗೆ ಸ್ವಾತಂತ್ರ್ಯ ಹೋರಾಟ, ಡಾ.ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನದ ಆಶಯಗಳು ಹಾಗೂ ಪ್ರಜಾಪ್ರಭುತ್ವದ ಮಹತ್ವ ಪರಿಚಯಿಸುವುದು ಇದರ ಉದ್ದೇಶವಾಗಿದೆ.

ತಾಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ವಿದ್ಯಾರ್ಥಿಗಳಿಗೆ ಸ್ಪರ್ಧೆಗಳನ್ನು ಆಯೋಜಿಸಿ, ನ.26ರಂದು ರಾಜ್ಯಮಟ್ಟದ ಕಾರ್ಯಕ್ರಮದಲ್ಲಿ ವಿಜೇತರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಟಿ.ರಘುಮೂರ್ತಿ, ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸ್, ಮಾಜಿ ಸಚಿವ ಎಚ್. ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಸೇರಿದಂತೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

# ನಕಲಿ ರಾಷ್ಟ್ರೀಯವಾದಿ ಬಿಜೆಪಿಯಿಂದ ದೇಶಭಕ್ತಿ ಕಲಿಯುವ ಅಗತ್ಯವಿಲ್ಲ: ಖಂಡ್ರೆ

● ವಿಕ್ರಮ ವಾಹಿನಿ | ಬೆಂಗಳೂರು

ಭಾರತದ ಸ್ವಾತಂತ್ರ್ಯಕ್ಕಾಗಿ ತ್ಯಾಗ, ಬಲಿದಾನ ಮಾಡಿದ ಕಾಂಗ್ರೆಸ್ ಪಕ್ಷ, ನಕಲಿ ರಾಷ್ಟ್ರೀಯವಾದಿ ಬಿಜೆಪಿಯಿಂದ ರಾಷ್ಟ್ರಭಕ್ತಿ, ದೇಶಪ್ರೇಮ ಕಲಿಯುವ ಅಗತ್ಯವಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ರಾಜ್ಯ ಸರ್ಕಾರ, ರಾಷ್ಟ್ರಪತಿ, ಪ್ರಧಾನಿ ಹಾಗೂ ರಾಜ್ಯಪಾಲರು ಭಾಗವಹಿಸುವ ಕಾರ್ಯಕ್ರಮ ಹೊರತುಪಡಿಸಿ, ಸರ್ಕಾರದ ಇತರ ಸಮಾರಂಭಗಳಲ್ಲಿ 'ವಂದೇ ಮಾತರಂ' ಗೀತೆಯ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವಂತೆ ಆದೇಶಿಸಿರುವ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಅವರು ಪ್ರತಿಕ್ರಿಯೆ ನೀಡಿದರು.



ಬ್ರಿಟಿಷರ ದಾಸ್ಯದಿಂದ ಭಾರತ ಮಾತೆಯನ್ನು ಬಂಧಮುಕ್ತಗೊಳಿಸಲು ಕಾಂಗ್ರೆಸ್ ನೇತೃತ್ವದಲ್ಲಿ ನಡೆದ ಸ್ವಾತಂತ್ರ್ಯ ಚಳವಳಿಯಲ್ಲಿ ವಂದೇ ಮಾತರಂ ಗೀತೆಯನ್ನು ಹಾಡಿ, ಇಡೀ ದೇಶದ ಉತ್ಸಾಹಿ ಯುವಕರಲ್ಲಿ ದೇಶಪ್ರೇಮ ತುಂಬಿದ್ದೇ ಕಾಂಗ್ರೆಸ್ ಎಂದರು.

ಸ್ವಾತಂತ್ರ್ಯಾಪೂರ್ವದಲ್ಲಿ1937ರ ಕಾಂಗ್ರೆಸ್ ಪ್ರಣಾಳಿಕೆಯಲ್ಲಿಯೇ 2 ಚರಣ ಹಾಡಬೇಕು ಎಂಬು ನಿಲುವು ತೆಗೆದುಕೊಳ್ಳಲಾಗಿದೆ. ಇದಕ್ಕೆ ನಮ್ಮ ಸರ್ಕಾರ ಇಂದಿಗೂ ಬದ್ಧವಾಗಿದೆ. ಇಷ್ಟು ದಿನಗಳ ಕಾಲ ಇಲ್ಲದ 6 ಚರಣದ ಬಗ್ಗೆ ಈಗ ಕಣ್ಣು ತೆರೆದಿರುವ ಬಿಜೆಪಿ 90 ವರ್ಷ ಏಕೆ ಸುಮ್ಮನ್ನಿತ್ತು ಎಂದು ಖಂಡ್ರೆ ಪ್ರಶ್ನಿಸಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ಇದೆ. ಕೇಂದ್ರ ಸರ್ಕಾರ ರಾಜ್ಯಕ್ಕೆ ನ್ಯಾಯಯುತವಾಗಿ ನೀಡಬೇಕಾದ ಅನುದಾನವನ್ನೂ ನೀಡುತ್ತಿಲ್ಲ. ಬಿಜೆಪಿಯವರು ರಾಜ್ಯದ ಹಿತದೃಷ್ಟಿಯಿಂದ ಕೇಂದ್ರದ ಮೇಲೆ ಒತ್ತಡ ಹೇರಿ ಹಣ ಕೊಡಿಸುವ ಕಾರ್ಯ ಮಾಡುವ ಬದಲು, ಇಂತಹ ವಿಚಾರ ಇಟ್ಟುಕೊಂಡು ಕಾಲಹರಣ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಬೆಂಗಳೂರಿನಲ್ಲಿ 14,042 ಹಳೆಯ ವಾಹನಗಳು ಗುಜರಿಗೆ



● ವಿಕ್ರಮ ವಾಹಿನಿ | ಬೆಂಗಳೂರು

ನಗರದಲ್ಲಿ ಹೆಚ್ಚುತ್ತಿರುವ ಹಳೆಯ ವಾಹನಗಳಿಂದ ಉಂಟಾಗುತ್ತಿರುವ ವಾಯುಮಾಲಿನ್ಯ ನಿಯಂತ್ರಿಸುವ ಉದ್ದೇಶದಿಂದ ರಾಜ್ಯ ಸಾರಿಗೆ ಇಲಾಖೆ ಜಾರಿಗೆ ತಂದಿರುವ ವಾಹನ ಗುಜರಿ ನೀತಿಯಡಿ ಕಳೆದ ಮೂರು ವರ್ಷಗಳಲ್ಲಿ 14,042 ಹಳೆಯ ವಾಹನಗಳನ್ನು ಗುಜರಿಗೆ ಹಾಕಲಾಗಿದೆ.

ಕಳೆದ 2022ರ ಡಿಸೆಂಬರ್‌ನಲ್ಲಿ ಕೇಂದ್ರದ ಸೂಚೆಯಂತೆ ರಾಜ್ಯದಲ್ಲಿ ವಾಹನ ಗುಜರಿ ನೀತಿ ಜಾರಿಗೆ ಬಂದಿದ್ದು, 2023ರ ಸೆ.1ರಿಂದ 2026ರ ಜು.31ರವರೆಗೆ ನೋಂದಾಯಿತ ವಾಹನ ಸ್ಕ್ರ್ಯಾಪಿಂಗ್ ಕೇಂದ್ರಗಳ ಮೂಲಕ ಒಟ್ಟು 14,042 ವಾಹನಗಳನ್ನು ಗುಜರಿಗೆ ಹಾಕಲಾಗಿದೆ. ಇದರಲ್ಲಿ 9,976 ಖಾಸಗಿ ಹಾಗೂ 3,390 ಸರ್ಕಾರಿ ಹಳೆಯ ವಾಹನಗಳು ಸೇರಿವೆ.

ರಾಜ್ಯದಲ್ಲಿ 15 ವರ್ಷಕ್ಕಿಂತ ಹಳೆಯದಾದ ಸರ್ಕಾರಿ ವಾಹನಗಳನ್ನು ಗುಜರಿಗೆ ಹಾಕುವ ವ್ಯವಸ್ಥೆ ಜಾರಿಯಲ್ಲಿದೆ. ಅಲ್ಲದೆ, ವಾಹನ ಮಾಲೀಕರು ತಮ್ಮ ಹಳೆಯ ವಾಹನಗಳನ್ನು ಸ್ವಯಂಪ್ರೇರಿತವಾಗಿ ಸ್ಕ್ರ್ಯಾಪ್ ಮಾಡಿಸಿಕೊಳ್ಳಲು ಅವಕಾಶವಿದೆ.

ಹಳೆಯ ವಾಹನವನ್ನು ಗುಜರಿಗೆ ಹಾಕಿ ಹೊಸ ವಾಹನ ಖರೀದಿಸುವವರಿಗೆ ಸಾರಿಗೆ ಇಲಾಖೆ ತೆರಿಗೆ ವಿನಾಯಿತಿ ನೀಡುತ್ತಿದೆ. ದ್ವಿಚಕ್ರ ವಾಹನಗಳನ್ನು ಸ್ಕ್ರ್ಯಾಪ್ ಮಾಡಿದರೆ 1,000ರಿಂದ 5,000ರವರೆಗೆ ಹಾಗೂ ನಾಲ್ಕು ಚಕ್ರದ ವಾಹನಗಳಿಗೆ 10,000ರಿಂದ 50,000ರವರೆಗೆ ತೆರಿಗೆ ವಿನಾಯಿತಿ ದೊರೆಯಲಿದೆ.

ಬಳಕೆಯ ಅವಧಿ ಮುಗಿದ ವಾಹನಗಳನ್ನು ಸ್ವಯಂಪ್ರೇರಿತವಾಗಿ ಗುಜರಿಗೆ ಹಾಕಲು ಪ್ರೋತಾಹಿಸುವುದು ಹಾಗೂ ಅವುಗಳ ವಿವಿಧ ಭಾಗಗಳು ಮತ್ತು ಲೋಹಗಳನ್ನು ವೈಜ್ಞಾನಿಕವಾಗಿ ಮರುಬಳಕೆ ಮಾಡುವ ವ್ಯವಸ್ಥೆ ರೂಪಿಸುವುದು ನೀತಿಯ ಪ್ರಮುಖ ಉದ್ದೇಶವಾಗಿದೆ. ಇದರಿಂದ ಹಳೆಯ ವಾಹನಗಳ ಸಂಖ್ಯೆಯನ್ನು ಕಡಿಮೆ ಮಾಡುವುದರ ಜೊತೆಗೆ ಪರಿಸರ ಸಂರಕ್ಷಣೆಗೆ ಸಹಕಾರಿಯಾಗಲಿದೆ.

ಹಳೆಯ ವಾಹನಗಳನ್ನು ಗುಜರಿಗೆ ಹಾಕುವ ಪ್ರಮಾಣ ಹೆಚ್ಚಿಸಲು ನೋಂದಾಯಿತ ವಾಹನ ಸ್ಕ್ರ್ಯಾಪಿಂಗ್ ಕೇಂದ್ರಗಳ ಸಂಖ್ಯೆಯನ್ನು ವಿಸ್ತರಿಸುವುದಕ್ಕೂ ಇಲಾಖೆ ಮುಂದಾಗಿದೆ.

ಇದೇ ವೇಳೆ, ವಾಹನ ಮಾಲೀಕರು ದೆಹಲಿ ಮಾದರಿಯಲ್ಲಿ 15 ಮತ್ತು 20 ವರ್ಷಕ್ಕಿಂತ ಹಳೆಯ ವಾಹನಗಳನ್ನು ಕಡ್ಡಾಯವಾಗಿ ಗುಜರಿಗೆ ಹಾಕುವ ನಿಯಮವನ್ನು ರಾಜ್ಯದಲ್ಲೂ ಜಾರಿಗೆ ತರಬೇಕು ಎಂಬ ಒತ್ತಾಯ ಕೇಳಿಬಂದಿದೆ.

# ಮೂರು ನಿಲ್ದಾಣಗಳ ಹೆಸರು ಬದಲಿಸಲು ಮೆಟ್ರೋ ನಿಗಮಕ್ಕೆ ರಾಮಲಿಂಗಾ ರೆಡ್ಡಿ ಪತ್ರ

● ವಿಕ್ರಮ ವಾಹಿನಿ | ಬೆಂಗಳೂರು

ಬಿಟಿಎಂ ಲೇಔಟ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮೂರು ಮೆಟ್ರೋ ರೈಲು ನಿಲ್ದಾಣಗಳ ಹೆಸರನ್ನು ಬದಲಾಯಿಸುವಂತೆ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ನಮ್ಮ ಮೆಟ್ರೋ ರೈಲು ನಿಗಮಕ್ಕೆ ಪತ್ರ ಬರೆದಿದ್ದಾರೆ.

ಜೆ.ಪಿ.ನಗರ 4ನೇ ಹಂ ಮೆಟ್ರೋ ನಿಲ್ದಾಣವನ್ನುಎಸ್.ಎಸ್.ಪಾಳ್ಯ ಮೆಟ್ರೋ ನಿಲ್ದಾಣವೆಂದು, ತಾವರೆಕೆರೆ ಮೆಟ್ರೋ ನಿಲ್ದಾಣವನ್ನು ಎಸ್.ಜಿ.ಪಾಳ್ಯ ಮೆಟ್ರೋ ನಿಲ್ದಾಣವೆಂದು ಹಾಗೂ ಡೈರಿ ವೃತ್ತ ಮೆಟ್ರೋ ನಿಲ್ದಾಣವನ್ನು ಲಕ್ಕಸಂದ್ರ ಮೆಟ್ರೋ ನಿಲ್ದಾಣವೆಂದು ಮರು ನಾಮಕರಣ ಮಾಡುವಂತೆ ಮೆಟ್ರೋ ರೈಲು ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಬರೆದಿರುವ ಪತ್ರದಲ್ಲಿ ಸಚಿವರು ತಿಳಿಸಿದ್ದಾರೆ.



ನನ್ನ ಮತ ಕ್ಷೇತ್ರವಾದ ಬಿಟಿಎಂ ಲೇಔಟ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಹಾಗೂ ನಿರ್ಮಾಣ ಹಂತದಲ್ಲಿರುವ ಮೆಟ್ರೋ ನಿಲ್ದಾಣಗಳ ಹೆಸರನ್ನು ಆಯಾ ನಿಲ್ದಾಣಗಳು ಇರುವ ಸ್ಥಳೀಯ ಪ್ರವೇಶದ ಹೆಸರು, ಐತಿಹಾಸಿಕ ಹಾಗೂ ಭೌಗೋಳಿಕ ಮಹತ್ವ ಮತ್ತು ಸಾರ್ವಜನಿಕರ ಸಾಮಾನ್ಯ ಅಭಿಪ್ರಾಯವನ್ನು ಪರಿಗಣಿಸಿ ಸೂಕ್ತವಾಗಿ ಮರುನಾಮಕರ ಮಾಡುವ ಅಗತ್ಯವಿದೆ ಎಂದು ಅವರು ಹೇಳಿದ್ದಾರೆ.

ಪ್ರಸ್ತುತ ಕೆಲವು ಮೆಟ್ರೋ ನಿಲ್ದಾಣಗಳ ಹೆಸರುಗಳು ನಿಲ್ದಾಣ ಇರುವ ನಿಖರ ಸ್ಥಳ ಅಥವಾ ಆ ಪ್ರದೇಶದ ಜನರಿಗೆ ಹೆಚ್ಚು ಪರಿಚಿತವಾಗಿರುವ ಸ್ಥಳೀಯ ಹೆಸರನ್ನು ಪ್ರತಿಬಿಂಬಿಸುವುದಿಲ್ಲ. ಇದರಿಂದ ಸಾರ್ವಜನಿಕರಿಗೆ ನಿಲ್ದಾಣದ ಸ್ಥಳವನ್ನು ಗುರುತಿಸುವಲ್ಲಿ ಕೆಲವೊಮ್ಮೆ ಗೊಂದಲ ಉಂಟಾಗುವ ಸಾಧ್ಯತೆ ಇದೆ ಎಂದು ಅವರು ತಿಳಿಸಿದ್ದಾರೆ.

ಸ್ಥಳೀಯ ನಿವಾಸಿಗಳು, ಸಾರ್ವಜನಿಕರು, ಸ್ಥಳೀಯ ಮುಖಂಡರುಗಳ ಅಭಿಪ್ರಾಯ ಪಡೆದು ಸಾರ್ವಜನಿಕ ಹಿತಾಸಕ್ತಿಗೆ ಅನುಗುವಾಗಿ ಪರಿಗಣಿಸಿ ಈ ಮೂರು ನಿಲ್ದಾಣಗಳ ಹೆಸರನ್ನು ಮರು ನಾಮಕರಣ ಮಾಡಲು ಕ್ರಮ ಕೈಗೊಳ್ಳಲು ಅವರು ಪತ್ರದಲ್ಲಿ ಕೋರಿದ್ದಾರೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ವಿಕ್ರಮ ವಾಹಿನಿ

# ವಂದೇ ಮಾತರಂ ಗೀತೆ ಮೊಟಕು ವಿರುದ್ಧ ಪಾದಯಾತ್ರೆ: ಬಿ.ವೈ.ವಿಜಯೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು

ಬಿಜೆಪಿ ಮತ್ತು ಸಾರ್ವಜನಿಕರು ಇದೇ 15ರಿಂದ 5 ದಿನಗಳ ಕಾಲ ರಾಜ್ಯದ ಎಲ್ಲ 224 ವಿಧಾನಸಭಾ ಕ್ಷೇತ್ರಗಳಲ್ಲಿ ಪಾದಯಾತ್ರೆ ಮೂಲಕ ತಹಸೀಲ್ದಾರ್, ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಲಿದ್ದಾರೆ. ಈ ಮೂಲಕ ವಂದೇ ಮಾತರಂ ಗೀತೆ ಮೊಟಕುಗೊಳಿಸಿದ್ದರ ವಿರುದ್ಧ ರಾಜ್ಯ ಸರಕಾರದ ವಿರುದ್ಧ ಒತ್ತಡ ಹೇರಲಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಹೇಳಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಶ್ನೆಗೆ ಉತ್ತರ ನೀಡಿದರು. ರಾಜ್ಯ ಸರಕಾರವು ತನ್ನ ನಿರ್ಧಾರವನ್ನು ಹಿಂದಕ್ಕೆ ಪಡೆಯಬೇಕೆಂಬ ಆಗ್ರಹವನ್ನು ಮುಂದಿಡಲಿದ್ದೇವೆ ಎಂದು ತಿಳಿಸಿದರು.

ಮೊನ್ನೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಮ್ಮ ಸಚಿವಸಂಪುಟ ಸಭೆಯಲ್ಲಿ ಒಂದು ಮಹತ್ವದ ತೀರ್ಮಾನ ಮಾಡಿದ್ದಾರೆ. ವಂದೇ ಮಾತರಂ ಕುರಿತಂತೆ ನಿರ್ಧಾರ ಮಾಡಿದ್ದಾರೆ. ವಂದೇ ಮಾತರಂ ಒಂದು ಕೇವಲ ಗೀತೆಯಲ್ಲ; ಕೋಟ್ಯಂತರ ಭಾರತೀಯರಲ್ಲಿ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಹೊತ್ತಿಸಿದ ಗೀತೆ ಅದು. ಅದು ಜನರಲ್ಲಿ ದೇಶಭಕ್ತಿಯ ಭಾವನೆ ಮೂಡಿಸಿದೆ. ಎಲ್ಲ ಆರು ಚರಣಗಳನ್ನು ಹಾಡುವಂತೆ ಕೇಂದ್ರ ಸರಕಾರ ತೀರ್ಮಾನಿಸಿದೆ.

ಆದರೆ, ಇಲ್ಲಿನ ಸರಕಾರ, ಮುಖ್ಯಮಂತ್ರಿಗಳು ಕೇವಲ ಎರಡು ಚರಣಗಳನ್ನು ಹಾಡಿದರೆ ಸಾಕೆಂದು ತೀರ್ಮಾನಿಸಿದ್ದು, ದುರ್ದೈವ. ಅಲ್ಪಸಂಖ್ಯಾತರನ್ನು ಓಲೈಸುವ ನಿಟ್ಟಿನಲ್ಲಿ ಈ ರೀತಿ ನಿರ್ಧಾರ ಮಾಡಿದ್ದಾರೆ ಎಂದು ಆಕ್ಷೇಪಿಸಿದರು. ಆರು ಚರಣ ಹಾಡುವ ಜಮ್ಮು ಕಾಶ್ಮೀರದ ಮುಖ್ಯಮಂತ್ರಿಗಳಿಂದ ಡಿ.ಕೆ.ಶಿವಕುಮಾರ್ ಅವರು ಪಾಠ ಕಲಿಯಲಿ ಎಂದು ಕಿವಿಮಾತು ಹೇಳಿದರು.

ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಎನ್.ಎಸ್.ನಂದೀಶ್ ರೆಡ್ಡಿ, ಪ್ರೀತಂ ಗೌಡ, ಯುವ ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಶಾಸಕ ಧೀರಜ್ ಮುನಿರಾಜು, ಮಾಜಿ ಶಾಸಕ ಎಂ.ಡಿ.ಲಕ್ಷ್ಮೀನಾರಾಯಣ್ ಅವರು ಉಪಸ್ಥಿತರಿದ್ದರು.

# ಬಿಜೆಪಿ ಅಧಿಕಾರಕ್ಕೆ ಬರುವುದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ: ವಿಜಯೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು

ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರುವುದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ನಡೆದ ಶ್ರೀಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಲ್ಪಸಂಖ್ಯಾತರ ಓಲೈಕೆಗಾಗಿ ಕಾಂಗ್ರೆಸ್ ಯಾವುದೇ ಮಟ್ಟಕ್ಕೂ ಇಳಿಯುತ್ತಿದೆ. ಬಿಜೆಪಿ ಮಾತ್ರ 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್' ಧ್ಯೇಯದಡಿ ಎಲ್ಲ ಸಮುದಾಯಗಳ ಅಭಿವೃದ್ಧಿಗೆ ಆದ್ಯತೆ ನೀಡುತ್ತಿದೆ ಎಂದರು.

ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ದೇಶಭಕ್ತಿಯ ಕಿಚ್ಚು ಹಚ್ಚಿದ 'ವಂದೇ ಮಾತರಂ' ಗೀತೆಗೆ ಕಾಂಗ್ರೆಸ್ ಗೌರವ ನೀಡುತ್ತಿಲ್ಲ. ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೇಳಿಬಂದಾಗಲೂ ಕಾಂಗ್ರೆಸ್ ಬೆಂಬಲಿಸುವ ರೀತಿಯಲ್ಲಿ ನಡೆದುಕೊಂಡಿದೆ ಎಂದು ಆರೋಪಿಸಿದರು.



ಗ್ಯಾರಂಟಿ ಯೋಜನೆಗಳಿಲ್ಲದೆ ಅಧಿಕಾರದಲ್ಲಿ ಮುಂದುವರಿಯಲು ಸಾಧ್ಯವಿಲ್ಲ ಎಂಬುದು ಕಾಂಗ್ರೆಸ್‌ಗೆ ಮನವರಿಕೆಯಾಗಿದೆ. ಹೀಗಾಗಿ 'ಭಾರತ್ ಜೋಡೊ' ಸಂಘಗಳ ಮೂಲಕ ಜನರ ಕಿವಿಗೆ ಹೂ ಮುಡಿಸಿ ಮತ್ತೆ ಅಧಿಕಾರಕ್ಕೆ ಬರಲು ಪ್ರಯತ್ನಿಸುತ್ತಿದೆ ಎಂದು ಟೀಕಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು 2047ರ ವೇಳೆಗೆ ವಿಕಸಿತ ಭಾರತ ನಿರ್ಮಾಣದ ಗುರಿಯೊಂದಿಗೆ ದೇಶವನ್ನು ಮುನ್ನಡೆಸುತ್ತಿದ್ದಾರೆ ಎಂದರು.

**ಗೊಲ್ಲ ಸಮುದಾಯಕ್ಕೆ ಅವಕಾಶ**

ಬಿಜೆಪಿ ಸರ್ಕಾರ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಹಲವು ಕ್ರಮಗಳನ್ನು ಕೈಗೊಂಡಿದೆ. ಕೇಂದ್ರದ ಮೋದಿ ಸಂಪುಟದಲ್ಲೂ ಹಿಂದುಳಿದ ಸಮುದಾಯಗಳಿಗೆ ಹೆಚ್ಚಿನ ಪ್ರಾತಿನಿಧ್ಯ ನೀಡಲಾಗಿದೆ ಎಂದು ಹೇಳಿದರು.

ಗೊಲ್ಲ ಸಮುದಾಯ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿಯಾಗಬೇಕು. ಸಮುದಾಯಕ್ಕೆ ಸೂಕ್ತ ಮೀಸಲಾತಿ ಹಾಗೂ ರಾಜಕೀಯ ಪ್ರಾತಿನಿಧ್ಯ ದೊರೆಯುವ ನಿಟ್ಟಿನಲ್ಲಿ ಬಿಜೆಪಿ ಪ್ರಯತ್ನಿಸಲಿದೆ ಎಂದರು.

2028ರ ಚುನಾವಣೆಯ ಬಳಿಕ ಮತ್ತೆ ತಾವೇ ಮುಖ್ಯಮಂತ್ರಿ ಆಗಬೇಕೆಂಬ ಡಿ.ಕೆ.ಶಿವಕುಮಾರ್ ಅವರ ಕನಸು ನನಸಾಗುವುದಿಲ್ಲ. ಮುಂದಿನ ಬಾರಿ ಬಿಜೆಪಿ ಅಧಿಕಾರಕ್ಕೆ ಬರುವುದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದು ವಿಜಯೇಂದ್ರ ಹೇಳಿದರು.

ರಾಜ್ಯದಲ್ಲಿ ಖಾಲಿ ಇರುವ ಸುಮಾರು ಎರಡೂವರೆ ಲಕ್ಷ ಹುದ್ದೆಗಳಿಗೆ ನೇಮಕಾತಿ ನಡೆಸದೆ ಯುವ ಸಂಘಟನೆಗಳಿಗೆ ಹಣ ನೀಡುವ ಮಾತುಗಳನ್ನು ಕಾಂಗ್ರೆಸ್ ಆಡುತ್ತಿದೆ. ರಾಜ್ಯದಲ್ಲಿ ಮಾದಕ ವಸ್ತುಗಳ ಜಾಲವೂ ಹೆಚ್ಚುತ್ತಿದೆ ಎಂದು ಆರೋಪಿಸಿದರು.

ಕಾರ್ಯಕ್ರಮದಲ್ಲಿ ಛಲವಾದಿ ನಾರಾಯಣಸ್ವಾಮಿ, ಡಾ.ಸಿ.ಎನ್.ಅಶ್ವತ್ಥನಾರಾಯಣ, ಎನ್.ರವಿಕುಮಾರ್, ರಘು ಕೌಟಿಲ್ಯ, ಧೀರಜ್ ಮುನಿರಾಜು ಸೇರಿದಂತೆ ಪಕ್ಷದ ಮುಖಂಡರು ಹಾಗೂ ಗೊಲ್ಲ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ಕಾಣದ ಕೈಗಳಿಂದ ಕೆ.ಎನ್.ಆರ್ ಗೆ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನ ಕೈತಪ್ಪಿತು: ರಾಜೇಂದ್ರ ರಾಜಣ್ಣ

● ವಿಕ್ರಮ ವಾಹಿನಿ । ಬೆಂಗಳೂರು

ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನ ಕೈತಪ್ಪಿದ ಹಿನ್ನೆಲೆಯಲ್ಲಿ ಕೆ.ಎನ್.ರಾಜಣ್ಣ ಅವರ ಪುತ್ರ ಹಾಗೂ ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ಬಹಿರಂಗ ಅಸಮಾಧಾನ ವ್ಯಕ್ತಪಡಿಸಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಣ್ಣ ಅವರಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸಬೇಕಿದೆ ಎಂದು ಒತ್ತಾಯಿಸಿದ್ದಾರೆ.

ಈ ಹಿಂದೆ ಅಪೆಕ್ಸ್ ಬ್ಯಾಂಕ್‌ಗೆ ರಾಜಣ್ಣ ಅವರನ್ನು ಅಧ್ಯಕ್ಷರನ್ನಾಗಿ ಮಾಡುವುದಾಗಿ ಭರವಸೆ ನೀಡಲಾಗಿತ್ತು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟ ಭರವಸೆ ನೀಡುವ ಜೊತೆಗೆ ಪ್ರಯತ್ನ ಕೂಡ ಮಾಡಿದ್ದರು. ಆದರೆ ಕಾಣದ ಕೈಗಳು ಕೆಲಸ ಮಾಡಿದ್ದರಿಂದಾಗಿ ರಾಜಣ್ಣ ಅವರಿಗೆ ಅವಕಾಶ ತಪ್ಪಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ರಾಜಣ್ಣ ಅವರನ್ನು ಕಡೆಗಣಿಸಿದಷ್ಟು ಕಾಂಗ್ರೆಸ್ ಪಕ್ಷಕ್ಕೆ ಹಾನಿಯಾಗಲಿದೆ. ಪರಿಶಿಷ್ಟ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಮತಗಳು ಕಾಂಗ್ರೆಸ್‌ನಿಂದ ದೂರವಾಗುತ್ತವೆ. ರಾಜಣ್ಣ ಅವರನ್ನು ತುಳಿಯಲು ವ್ಯವಸ್ಥಿತವಾದಂತಹ ಪ್ರಯತ್ನಗಳಾಗುತ್ತಿವೆ ಎಂದು ಅವರು ಆರೋಪಿಸಿದರು. ರಾಜೇಂದ್ರ ರಾಜಣ್ಣ ಅವರ ಹೇಳಿಕೆಯಿಂದ ಕಾಂಗ್ರೆಸ್ ಪಕ್ಷದೊಳಗಿನ ಆಂತರಿಕ ಅಸಮಾಧಾನ ಮತ್ತಷ್ಟು ಬಹಿರಂಗವಾಗಿದ್ದು, ಪಕ್ಷದ ವರಿಷ್ಠರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ರಾಜಣ್ಣ ಅವರಿಗೆ ಸೂಕ್ತ ಸ್ಥಾನಮಾನ ಕಲ್ಪಿಸಬೇಕು ಎಂಬ ಒತ್ತಾಯ ಕೇಳಿಬಂದಿದೆ.

ಇದರಿಂದ ಪಕ್ಷದೊಳಗಿನ ನಾಯಕತ್ವದ ನಿರ್ಧಾರಗಳ ಕುರಿತು ಅಸಮಾಧಾನ ವ್ಯಕ್ತವಾಗಿದ್ದು, ರಾಜಣ್ಣ ಅವರಿಗೆ ಸೂಕ್ತ ರಾಜಕೀಯ ಸ್ಥಾನಮಾನ ನೀಡುವಂತೆ ಬೆಂಬಲಿಗರಿಂದ ಒತ್ತಾಯ ಕೇಳಿಬಂದಿದೆ.

ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನಕ್ಕೆ ರಾಜಣ್ಣ ಅಧ್ಯಕ್ಷರಾಗುತ್ತಾರೆ ಎಂದು ಹಲವು ಬಾರಿ ಹೇಳಲಾಗಿತ್ತು. ಆದರೆ ಕೊನೆಗಳಿಗೆಯಲ್ಲಿ ಬೇರೆ ರೀತಿಯ ಬೆಳವಣಿಗೆಗಳಾಗಿದ್ದವು ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅಪೆಕ್ಸ್ ಬ್ಯಾಂಕ್ ಚುನಾವಣೆಯಲ್ಲಿ ಸಿದ್ದರಾಮಯ್ಯ ಅವರ ಆಪ್ತ ಕೆ.ಎನ್.ರಾಜಣ್ಣ ಅವರಿಗೆ ಹಿನ್ನಡೆಯಾಗಿದ್ದು, ಪಕ್ಷದಲ್ಲಿ ಅಸಮಾಧಾನ ಕುದಿಯುವಂತೆ ಮಾಡಿದೆ.

# 17ರಿಂದ ಸೇವಾ ಸಂಕಲ್ಪ ಅಭಿಯಾನ: ಬಿ.ವೈ.ವಿಜಯೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು

ನಮ್ಮ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವೀನ್ ಜೀ ಅವರ ಅಪೇಕ್ಷೆಯಂತೆ ಇದೇ ಸೆ.17ರಿಂದ ಅಕ್ಟೋಬರ್ 17ರವರೆಗೆ ಸೇವಾ ಸಂಕಲ್ಪ ಅಭಿಯಾನವನ್ನು ನಡೆಸಲಾಗುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಇಂದು ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿಜೀ ಅವರ 25 ವರ್ಷಗಳ ಸಾರ್ವಜನಿಕ ಸೇವೆಯ ಹಿನ್ನೆಲೆಯಲ್ಲಿ ಅಭಿಯಾನ ನಡೆಯಲಿದೆ. ಪ್ರತಿ ಬೂತ್‌ನಲ್ಲಿ ಹಾಗೂ ರಾಜ್ಯದ ಮನೆಮನೆಗಳಲ್ಲಿ ಆಶೀರ್ವಾದದ ದೀಪ ಸೇರಿ 12 ವಿವಿಧ ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದು ಹೇಳಿದರು.

'ಭಾರತದ ಕನಸು' ಕಾರ್ಯಕ್ರಮದಡಿ ವಿದ್ಯಾರ್ಥಿಗಳಿಗೆ ಚಿತ್ರಕಲಾ ಮತ್ತು ಭಾಷಣ ಸ್ಪರ್ಧೆ ಆಯೋಜಿಸಲಾಗುವುದು. ನಮೋ ಸೇವಾ ಬೀದಿನಾಟಕ ಕಾರ್ಯಕ್ರಮ ನಡೆಯಲಿದೆ. ರಾಷ್ಟ್ರದ ಪರಿವರ್ತನೆಯನ್ನು ತಿಳಿಸಲಾಗುವುದು. ಅಂಗನವಾಡಿ ಮಿಲನ ಎಂಬ ಕಾರ್ಯಕ್ರಮವನ್ನೂ ಏರ್ಪಡಿಸಲಿದ್ದೇವೆ ಎಂದು ಮಾಹಿತಿ ನೀಡಿದರು.


'ಬದಲಾವಣೆಯ ಕಥೆ' ಮೂಲಕ ಮೋದಿಜೀ ಅವರ ಯೋಜನೆಗಳು ಮತ್ತು ಫಲಾನುಭವಿಗಳ ಮೇಲೆ ಆದ ಪರಿಣಾಮವನ್ನು ತಿಳಿಸಿಕೊಡಲಿದ್ದೇವೆ. ವಿಕಸಿತ ಭಾರತ ಸಂಕಲ್ಪ ಯಾತ್ರೆ, ಸೇವಾ ಜ್ಯೋತಿ ಯಾತ್ರೆಯೂ ನಡೆಯಲಿದೆ. ಇದು ರಾಷ್ಟ್ರವ್ಯಾಪಿ ಯಾತ್ರೆ ಎಂದು ತಿಳಿಸಿದರು.

ವಾರಣಾಸಿಗೆ ನದಿಗಳ ಪವಿತ್ರ ಜಲವನ್ನು ಒಯ್ಯುವ ಯಾತ್ರೆಯೂ ಇದೆ. ಸೇವೆಯೇ ನನ್ನ ಕೊಡುಗೆ ಎಂಟನೆಯದು. ಇದರಡಿ ರಕ್ತದಾನ ಶಿಬಿರ, ಸಸಿ ನೆಡುವುದು, ಸ್ವಚ್ಛತಾ ಕಾರ್ಯಕ್ರಮ, ಆರೋಗ್ಯ ಶಿಬಿರ, ಪ್ಲಾಸ್ಟಿಕ್ ಜಾಗೃತಿ, ಸೈಬರ್ ಭದ್ರತಾ ಜಾಗೃತಿ ಸೇರಿ 25 ಸೇವಾ ಚಟುವಟಿಕೆಗಳಿರುತ್ತವೆ ಎಂದು ವಿವರಿಸಿದರು.

ಸೇವಾ ಸೇತು ಅಭಿಯಾನದ ಮೂಲಕ ಕೇಂದ್ರ ಸರಕಾರದ ಜನಕಲ್ಯಾಣ ಯೋಜನೆಗಳ ಮಾಹಿತಿ ಕೊಡಲಿದ್ದೇವೆ. ಅರ್ಹರನ್ನು ನೋಂದಣಿ ಮಾಡಲಿದ್ದೇವೆ. ರಂಗೋಲಿ ರಾಷ್ಟ್ರ ಎಂಬ ಇನ್ನೊಂದು ಕಾರ್ಯಕ್ರಮವೂ ಇದೆ. ಬೆಂಗಳೂರಿನಲ್ಲಿ ರಾಷ್ಟ್ರೀಯ ಆವಿಷ್ಕಾರ ಸವಾಲು ಎಂಬ ಕಾರ್ಯಕ್ರಮದಡಿ ವಿದ್ಯಾರ್ಥಿಗಳು, ಐಟಿ ಉದ್ಯೋಗಿಗಳು, ನವ ಉದ್ಯಮಿಗಳು ಭಾಗವಹಿಸಬಹುದು ಎಂದರು. ಜನಸೇವಕ ಮಹಾಕುಂಭ ಎಂಬ 12ನೇ ಕಾರ್ಯಕ್ರಮವಿದ್ದು, ಪಂಚಾಯಿತಿ ಮಟ್ಟದಿಂದ ಸಂಸದರವರೆಗೆ ಎಲ್ಲ ಜನಪ್ರತಿನಿಧಿಗಳು ಭಾಗವಹಿಸುತ್ತಾರೆ ಎಂದು ಹೇಳಿದರು. ಸಾಮೂಹಿಕವಾಗಿ ವಂದೇ ಮಾತರಂ ಹಾಡುವ ಕಾರ್ಯಕ್ರಮ ನಡೆಯಲಿದ್ದು, 1.25 ಲಕ್ಷ ಜನಪ್ರತಿನಿಧಿಗಳು ಭಾಗವಹಿಸಿ ಹಾಡಿನ ಎಲ್ಲ ಚರಣಗಳನ್ನು ಹಾಡುತ್ತಾರೆ. ಇದೊಂದು ವಿಶ್ವ ದಾಖಲೆ ಆಗಲಿದೆ ಎಂದು ತಿಳಿಸಿದರು.

ಮೋದಿಜೀ ಅವರು ಯಾವುದೇ ಒಂದು ಭ್ರಷ್ಟಾಚಾರದ ಆರೋಪ ಇಲ್ಲದೇ, ಸ್ವಚ್ಛ ಚಾರಿತ್ರ್ಯವಂತ ಆಡಳಿತವನ್ನು ನೀಡಿದ್ದಾರೆ. ದೇಶದ ಸರ್ವತೋಮುಖ ಅಭಿವೃದ್ಧಿಯನ್ನು ಮುಂದಿಟ್ಟು, ದೇಶದಪ್ರಧಾನ ಸೇವಕ ಎಂಬ ಭಾವನೆಯಿಂದ ಒಂದು ದಿನವೂ ವಿಶ್ರಾಂತಿ ತೆಗೆದುಕೊಳ್ಳದೇ ಭಾರತದ ಅಭಿವೃದ್ಧಿಗೆ ಕಂಕಣಬದ್ಧರಾಗಿದ್ದಾರೆ ಎಂದು ವಿವರಿಸಿದರು.

ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಎನ್. ಎಸ್.ನಂದೀಶ್ ರೆಡ್ಡಿ, ಪ್ರೀತಂ ಗೌಡ, ಯುವ ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಶಾಸಕ ಧೀರಜ್ ಮುನಿರಾಜು, ಮಾಜಿ ಶಾಸಕ ಎಂ.ಡಿ.ಲಕ್ಷ್ಮೀ ನಾರಾಯಣ್ ಅವರು ಉಪಸ್ಥಿತರಿದ್ದರು.



# ಲಾಲ್‌ಬಾಗ್‌ನಲ್ಲಿ ಪರಿಸರ ಸ್ನೇಹಿ ಗೌರಿ, ಗಣೇಶ ಮೂರ್ತಿ ವಿತರಣೆ

● ವಿಕ್ರಮ ವಾಹಿನಿ । ಬೆಂಗಳೂರು

ಅವೆನ್ಯೂ ರಸ್ತೆಯ ವಾಸವಿ ಮಂಡಳಿ ಹಾಗೂ ವಾಸವಿ ಯುವಜನ ಸಂಘದಿಂದ ಕಳೆದ ಹತ್ತು ವರ್ಷಗಳಿಂದ ನಿರಂತರವಾಗಿ ಗಣೇಶ ಚತುರ್ಥಿಯನ್ನು ಪರಿಸರ ಸ್ನೇಹಿ ಹಾಗೂ ಅರ್ಥಪೂರ್ಣವಾಗಿ ಆಚರಿಸುತ್ತಿದ್ದು, ಈ ಬಾರಿಯೂ ಸಾರ್ವಜನಿಕರಿಗೆ ಪರಿಸರ ಸ್ನೇಹಿ ಗಣೇಶ ಹಾಗೂ ಗೌರಿ ಮೂರ್ತಿಗಳನ್ನು ವಿತರಿಸುತ್ತಿದೆ. ಭಾನುವಾರ ಬೆಳಿಗ್ಗೆ ಲಾಲ್ ಬಾಗ್ ನ ಪಶ್ಚಿಮ ದ್ವಾರದಲ್ಲಿ ಅರಣ್ಯ ಮತ್ತು ಪರಿಸರ ಸಚಿವ ರಾಮಲಿಂಗಾರೆಡ್ಡಿ ಮಣ್ಣಿನ ಮೂರ್ತಿಗಳನ್ನು ವಿತರಿಸಲಿದ್ದಾರೆ.

ಸಂಪ್ರದಾಯ ಮತ್ತು ಭಕ್ತಿಭಾವದಿಂದ ಪರಿಸರ ಸಂರಕ್ಷಿಸುವ ನಿಟ್ಟಿನಲ್ಲಿ ಹಬ್ಬ ಆಚರಿಸಬೇಕು ಎಂಬುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಜಲಮೂಲಗಳಿಗೆ ಮಾಲಿನ್ಯ ಉಂಟುಮಾಡುವ ವಸ್ತುಗಳನ್ನು ಬಳಸದೆ, ಪರಿಸರ ಸ್ನೇಹಿ ಮೂರ್ತಿಗಳನ್ನು ವಿತರಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಈ ವರ್ಷ ಸುಮಾರು 500 ಮಣ್ಣಿನ ಮೂರ್ತಿಗಳನ್ನು ವಿತರಣೆ ಮಾಡಲಾಗುತ್ತಿದೆ.

ಪರಿಸರ ಸ್ನೇಹಿ ಗಣೇಶ ಹಾಗೂ ಗೌರಿ ವಿಗ್ರಹಗಳನ್ನು ವಿತರಿಸುವ ಜೊತೆಗೆ ಪರಿಸರ ಸಂರಕ್ಷಣೆಯ ಕುರಿತು ಜನಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪಿಒಪಿ ಮೂರ್ತಿಗಳನ್ನು ಪ್ರತಿಷ್ಠಾಪಿಸಿರುವ ಕಾರ್ಯಕ್ರಮಗಳಲ್ಲಿ ತಾವು ಭಾಗವಹಿಸುವುದಿಲ್ಲ ಎಂದು ಸಚಿವ ರಾಮಲಿಂಗಾ ರೆಡ್ಡಿ ಹೇಳಿರುವುದು ಅತ್ಯಂತ ಸ್ವಾಗತಾರ್ಹ ಎಂದು ವಾಸವಿ ಯುವ ಜನ ಸಂಘದ ಅಧ್ಯಕ್ಷ ಗುರುಪ್ರಸಾದ್ ತಿಳಿಸಿದ್ದಾರೆ.

ಗಣೇಶ ಮೂರ್ತಿಗಳೊಂದಿಗೆ ಸಿಎ ಡಾ. ವಿಷ್ಣು ಭರತ್ ಆಲಂಪಲ್ಲಿ ಅವರು ರಚಿಸಿರುವ "ಎಜುಕೇಶ್ ಇಸ್ ಎ ಟೂಲ್ ಆಫ್ ಸೆಕ್ಸಸ್ " (ಶಿಕ್ಷಣವು ಯಶಸ್ಸಿನ ಸಾಧನ) ಎಂಬ ಪುಸ್ತಕವನ್ನೂ ಸಾರ್ವಜನಿಕರಿಗೆ ವಿತರಿಸಲಾಗುತ್ತಿದೆ. ಕಳೆದ ಹತ್ತು ವರ್ಷಗಳಿಂದ ನಿರಂತರವಾಗಿ ನಡೆಯುತ್ತಿರುವ ಈ ಪರಿಸರ ಸ್ನೇಹಿ ಗಣೇಶೋತ್ಸವ ಈ ಬಾರಿ ಇನ್ನಷ್ಟು ವೈಶಿಷ್ಟ್ಯ ಪೂರ್ಣವಾಗಿ ಆಚರಿಸಲಾಗುವುದು ಎಂದು ಗುರುಪ್ರಸಾದ್ ತಿಳಿಸಿದ್ದಾರೆ.

# ದಶಮಾನೋತ್ಸವ ಸಂಭ್ರಮದಲ್ಲಿ ಅನಘ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜರಾಜೇಶ್ವರಿ ನಗರದ ಅನಘ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ದಶಮಾನೋತ್ಸವದ ಸಂಭ್ರಮದಲ್ಲಿದ್ದು, ಹತ್ತು ವರ್ಷಗಳ ಅವಧಿಯಲ್ಲಿ ರೂ 50 ಕೋಟಿ ವಾರ್ಷಿಕ ವಹಿವಾಟು ದಾಖಲಿಸಿದೆ ಎಂದು ಸಂಸ್ಥೆಯ ಅಧ್ಯಕ್ಷ ಅಡಿಕೆ ವೆಂಕಟೇಶುಲು ತಿಳಿಸಿದ್ದಾರೆ.

ಮಾಧ್ಯಮ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಒಂದು ಕೋಟಿ ರೂಪಾಯಿ ವಾರ್ಷಿಕ ವಹಿವಾಟಿನೊಂದಿಗೆ ಹತ್ತು ವರ್ಷಗಳ ಹಿಂದೆ ಆರಂಭಗೊಂಡ ಸಂಸ್ಥೆ, ಇದೀಗ ರೂ 50 ಕೋಟಿ ವಾರ್ಷಿಕ ವಹಿವಾಟಿನ ಹಂತ ತಲುಪಿರುವುದು ಸಂತಸದ ಸಂಗತಿ. ಸಣ್ಣ ವ್ಯಾಪಾರಸ್ಥರು ಹಾಗೂ ಅತಿಸಣ್ಣ ಉದ್ಯಮಿಗಳಿಗೆ ಆರ್ಥಿಕ ನೆರವು ನೀಡುವ ಉದ್ದೇಶದಿಂದ ರೂಪಿಸಿರುವ 'ಅನಘ ಸರಳ ಯೋಜನೆ ಸಾಲದ ಮೂಲಕ ಫುಟ್‌ಪಾತ್ ವ್ಯಾಪಾರಿಗಳು ಸೇರಿದಂತೆ ಸಣ್ಣ ವ್ಯಾಪಾರಿಗಳಿಗೆ ರೂ 25 ಸಾವಿರದಿಂದ ರೂ 1 ಲಕ್ಷದವರೆಗೆ ಸಾಲ ಸೌಲಭ್ಯ ನೀಡಲಾಗುತ್ತಿದ್ದು, ಈ ಯೋಜನೆ ಉತ್ತಮ ಯಶಸ್ಸು ಕಂಡಿದೆ ಎಂದು ಅವರು ಹೇಳಿದರು.

1,080 ಷೇರುದಾರರೊಂದಿಗೆ ಆರಂಭಗೊಂಡ ಸಂಸ್ಥೆ, ಇದೀಗ 1,500ಕ್ಕೂ ಹೆಚ್ಚು ಷೇರುದಾರರನ್ನು ಹೊಂದಿದೆ. ಗ್ರಾಹಕರಿಗೆ ಮತ್ತಷ್ಟು ಸಮೀಪವಾಗಿ ಸೇವೆ ಒದಗಿಸುವ ಉದ್ದೇಶದಿಂದ ಸಂಸ್ಥೆಯ ಎರಡನೇ ಶಾಖೆಯನ್ನು ಮಂಡ್ಯದಲ್ಲಿಯೂ ಆರಂಭಿಸಲಾಗಿದೆ ಎಂದು ಅವರು ತಿಳಿಸಿದರು.



ಗೋಲ್ಡ್ ಲೋನ್, ವಾಹನ ಸಾಲ, ಮಾರ್ಟ್ಗೇಜ್ ಲೋನ್, ಬಿಸಿನೆಸ್ ಲೋನ್ ಹಾಗೂ ಪರ್ಸನಲ್ ಲೋನ್ ಸೇರಿದಂತೆ ವಿವಿಧ ಸಾಲ ಸೌಲಭ್ಯಗಳನ್ನು ಗ್ರಾಹಕರಿಗೆ ಒದಗಿಸಲಾಗುತ್ತಿದೆ. ಹಿರಿಯ ನಾಗರಿಕರ ಠೇವಣಿಗಳಿಗೆ ಶೇ.10ರ ವಾರ್ಷಿಕ ಬಡ್ಡಿದರದ ಸೌಲಭ್ಯ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದರು.

ಕಾಲಕ್ಕೆ ತಕ್ಕಂತೆ ಬದಲಾಗುತ್ತಿರುವ ಬ್ಯಾಂಕಿಂಗ್ ತಂತ್ರಜ್ಞಾನವನ್ನು ಅಳವಡಿಸಿಕೊಂಡು, ಗ್ರಾಹಕರಿಗೆ ಅತ್ಯುತ್ತಮ ಹಾಗೂ ತ್ವರಿತ ಬ್ಯಾಂಕಿಂಗ್ ಸೇವೆಗಳನ್ನು ಒದಗಿಸಲಾಗುತ್ತಿದೆ. ಮುಂದಿನ ಎರಡು ವರ್ಷಗಳಲ್ಲಿ ರೂ 100 ಕೋಟಿ ವಾರ್ಷಿಕ ವಹಿವಾಟು ಸಾಧಿಸುವ ಸ್ಪಷ್ಟ ಗುರಿಯನ್ನು ಸಂಸ್ಥೆ ಹೊಂದಿದೆ ಎಂದು ಅಡಿಕೆ ವೆಂಕಟೇಶುಲು ಹೇಳಿದರು.

ಸಂಸ್ಥೆಯ ಬೆಳವಣಿಗೆಯಲ್ಲಿ 11 ಮಂದಿ ನಿರ್ದೇಶಕರ ಸಂಪೂರ್ಣ ಸಹಕಾರ, ಪಾರದರ್ಶಕ ಆಡಳಿತ, ಗ್ರಾಹಕ ಸ್ನೇಹಿ ಸೇವೆ ಹಾಗೂ ಶಿಸ್ತಿನ ವ್ಯವಹಾರ ಪ್ರಮುಖ ಪಾತ್ರ ವಹಿಸಿವೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಶ್ರೀನಾಥ್ ಬಾಬು ಎಚ್.ಆರ್., ನಿರ್ದೇಶಕರಾದ ಸಂಜಯ್ ಜೋಷಿ, ಮಹೇಶ್ ಎಸ್.ಎನ್., ಡಾ. ಪ್ರಫುಲ್ಲಾ ತುಮಾಟಿ, ಪಿ.ಬಿ. ಕಾರ್ಯಪ್ಪ, ವಿಮಲ್ ಮಾಲು, ಐ.ಜಿ. ಪಾಟೀಲ್, ಲತಾ ವಿ. ಅಡಿಕೆ, ರಜನಿ ಎಸ್. ಜೋಷಿ, ರಾಧಿಕಾ ಶ್ರೀನಾಥ್ ಹಾಗೂ ಸ್ಮಿತಾ ಜಿ. ಗಾಯಕ್ವಾಡ್ ಉಪಸ್ಥಿತರಿದ್ದರು.

# ಮಾದಕ ವ್ಯಸನಿಗಳ ತಾಣವಾದ ಮೌರ್ಯ ಸರ್ಕಲ್ ಗಾಂಧಿ ಪಾರ್ಕ್

● ವಿಕ್ರಮ ವಾಹಿನಿ । ಬೆಂಗಳೂರು

*ನಗರದ ಹೃದಯಭಾಗದ ಮೌರ್ಯ ಸರ್ಕಲ್‌ನ ಗಾಂಧಿ ಪಾರ್ಕ್ ಇದೀಗ ಅಸ್ವಚ್ಛತೆ ಹಾಗೂ ಮಾದಕ ವ್ಯಸನಿಗಳ ಹಾವಳಿಯಿಂದ ಬಳಲುತ್ತಿದೆ. ಮಹಾತ್ಮ ಗಾಂಧೀಜಿ ಪ್ರತಿಮೆ ಸುತ್ತಮುತ್ತ ಧೂಳು, ಕಸ ಹಾಗೂ ಖಾಲಿ ಮದ್ಯದ ಸ್ಯಾಶೆಟ್‌ಗಳು ಕಂಡುಬರುತ್ತಿದ್ದು, ನಿರ್ವಹಣೆಯ ಬಗ್ಗೆ ಸಾರ್ವಜನಿಕರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.*

*1997ರ ನವೆಂಬರ್ 7ರಂದು ಅಂದಿನ ಎಐಸಿಸಿ ಅಧ್ಯಕ್ಷ ಸೀತಾರಾಮ್ ಕೇಸರಿ ಅವರು ಪ್ರತಿಮೆಯನ್ನು ಅನಾವರಣಗೊಳಿಸಿದ್ದರು. ಬಳಿಕ 2022ರಲ್ಲಿ ಅಂದಾಜು ರೂ.1 ಕೋಟಿ ವೆಚ್ಚದಲ್ಲಿ ಗಾಂಧಿ ಪಾರ್ಕ್ ಅಭಿವೃದ್ಧಿಪಡಿಸಲಾಗಿತ್ತು.*

*ಪ್ರಸ್ತುತ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಂದ ಪ್ರತಿಮೆ ಹಾಗೂ ಪೀಠ ಧೂಳಿನಿಂದ ಆವೃತವಾಗಿದೆ. ಪ್ರತಿಮೆಯ ಸುತ್ತಲಿನ ವಿದ್ಯುತ್ ತಂತಿ, ಬಲ್ಬ್‌ಗಳಿಗೂ ದುಷ್ಕರ್ಮಿಗಳು ಹಾನಿ ಮಾಡಿದ್ದಾರೆ ಎಂದು ಸ್ಥಳೀಯರು ತಿಳಿಸಿದ್ದಾರೆ.*

*ಪಾರ್ಕ್ ನಿರ್ವಹಣೆಗೆ ಸ್ವಚ್ಛತಾ ಸಿಬ್ಬಂದಿಯನ್ನು ನಿಯೋಜಿಸುವ ಜತೆಗೆ, ಮದ್ಯಪಾನ ಹಾಗೂ ಮಾದಕ ವ್ಯಸನಿಗಳ ಹಾವಳಿ ತಡೆಯಲು ಪೊಲೀಸರು ನಿಗಾ ವಹಿಸಬೇಕು ಎಂದು ಪಾದಚಾರಿಗಳು ಹಾಗೂ ಆಟೊ ಚಾಲಕರು ಒತ್ತಾಯಿಸಿದ್ದಾರೆ.*

*"ಅಕ್ಟೋಬರ್ 2ರಂದು ಗಾಂಧೀಜಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಬಳಿಕ ಸ್ಥಳದ ನಿರ್ವಹಣೆಯನ್ನು ಮರೆತುಬಿಡುವುದು ಸರಿಯಲ್ಲ. ಐತಿಹಾಸಿಕ ಸ್ಥಳವನ್ನು ಸದಾ ಸ್ವಚ್ಛವಾಗಿ ಕಾಪಾಡಬೇಕು" ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.*

# ಕರಾವಳಿಗೆ ರೂ.5,000 ಕೋಟಿ ವಿಶೇಷ ಪ್ಯಾಕೇಜ್‌ಗೆ ಮನವಿ

● ವಿಕ್ರಮ ವಾಹಿನಿ । ಬೆಂಗಳೂರು

ಕರಾವಳಿ ಭಾಗದಲ್ಲಿ ಆಯೋಜಿಸಲಾಗುತ್ತಿರುವ ರಾಜ್ಯ ಸಚಿವ ಸಂಪುಟ ಸಭೆಯ ಹಿನ್ನೆಲೆಯಲ್ಲಿ ಈ ಭಾಗದ ಸುದೀರ್ಘ ಬೇಡಿಕೆಗಳು ಹಾಗೂ ಸಮಗ್ರ ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿಧಾನ ಪರಿಷತ್ ಶಾಸಕ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಮಂಜುನಾಥ್ ಭಂಡಾರಿ ಅವರು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸಮಗ್ರ ಮನವಿ ಪತ್ರ ಸಲ್ಲಿಸಿದ್ದಾರೆ.

ಕರಾವಳಿ ಜಿಲ್ಲೆಗಳ ಆರ್ಥಿಕತೆ, ಮೀನುಗಾರಿಕೆ, ಪ್ರವಾಸೋದ್ಯಮ, ಉನ್ನತ ಶಿಕ್ಷಣ ಹಾಗೂ ಸಂಸ್ಕೃತಿಯ ರಕ್ಷಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು 5,000 ಕೋಟಿ ರೂ. ಮೊತ್ತದ ವಿಶೇಷ ಆರ್ಥಿಕ ಪ್ಯಾಕೇಜ್ ಘೋಷಣೆ ಸೇರಿದಂತೆ ಹಲವು ಮಹತ್ವದ ಯೋಜನೆಗಳನ್ನು ಸಂಪುಟ ಸಭೆಯ ಕಾರ್ಯಸೂಚಿಯಲ್ಲಿ ಸೇರಿಸುವಂತೆ ಅವರು ಕೋರಿದ್ದಾರೆ. ಅಲ್ಲದೆ, ಇದಕ್ಕೆ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಈ ಬಗ್ಗೆ ಅಗತ್ಯ ಕ್ರಮವಹಿಸಿ, ಪ್ರಮುಖ ಅಂಶಗಳನ್ನು ಸಂಪುಟ ಅಜೆಂಡಾದಲ್ಲಿ ಸೇರಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ. ಕರಾವಳಿ ಭಾಗದ ಮೀನುಗಾರಿಕೆ ಕ್ಷೇತ್ರದ ಮೂಲಸೌಕರ್ಯ ಬಲಪಡಿಸುವುದು, ಮೀನುಗಾರರಿಗೆ ಹೆಚ್ಚಿನ ಪರಿಹಾರ ಹಾಗೂ ಡೀಸೆಲ್ ಸಬ್ಸಿಡಿ ಕಲ್ಪಿಸುವಂತೆಯೂ ಮನವಿ ಮಾಡಿದ್ದಾರೆ.

ಬ್ರಹ್ಮಾವರ ಕೃಷಿ ಕಾಲೇಜು ಮೇಲ್ದರ್ಜೆ, ಮಂಗಳೂರಿನಲ್ಲಿ ಅಕ್ವಾಪಾರ್ಕ್, ಪಿಲಿಕುಳ ಅಭಿವೃದ್ಧಿ ಹಾಗೂ 'ಕರಾವಳಿ ಟೆಂಪಲ್ ಟೂರಿಸಂ' ಕಾರಿಡಾರ್ ಸೇರಿದಂತೆ ಹಲವು ಯೋಜನೆಗಳಿಗೂ ಒತ್ತು ನೀಡಿದ್ದಾರೆ.

ಮಂಗಳೂರಿನಲ್ಲಿ ಸೆ.18ರಂದು ನಡೆಯಲಿರುವ ಸಚಿವ ಸಂಪುಟ ಸಭೆಯು ಕರಾವಳಿಯ ನೈಜ ಸಮಸ್ಯೆಗಳಿಗೆ ಸ್ಪಂದಿಸಲು ಸೂಕ್ತ ವೇದಿಕೆಯಾಗಿದೆ ಎಂದು ಉಲ್ಲೇಖಿಸಿರುವ ಅವರು, ಯುವಜನರಿಗೆ ಸ್ಥಳೀಯ ಉದ್ಯೋಗಾವಕಾಶ ಒದಗಿಸುವ ಸುಧಾರಿತ ಕೌಶಲ್ಯಾಭಿವೃದ್ಧಿ ಕೇಂದ್ರ, ಕರಾವಳಿ ಸವೆತಕ್ಕೆ ಶಾಶ್ವತ ಪರಿಹಾರ, ರೈತರು ಹಾಗೂ ಮೀನುಗಾರರ ಆರ್ಥಿಕ ಸಬಲೀಕರಣಕ್ಕೆ ಪೂರಕವಾದ ಯೋಜನೆಗಳಿಗೆ ತಕ್ಷಣವೇ ಆಡಳಿತಾತ್ಮಕ ಅನುಮೋದನೆ ಹಾಗೂ ಅಗತ್ಯ ಅನುದಾನ ಕಲ್ಪಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

## ಮೀನುಗಾರಿಕೆ, ಶಿಕ್ಷಣ, ಪ್ರವಾಸೋದ್ಯಮ ಸೇರಿ ಕರಾವಳಿಯ ಸಮಗ್ರ ಅಭಿವೃದ್ಧಿಗೆ ಒತ್ತು

- ಬ್ರಹ್ಮಾವರ ಕೃಷಿ ಕಾಲೇಜು ಮೇಲ್ದರ್ಜೆ: 342 ಎಕರೆ ಜಮೀನು ಹಾಗೂ ರೂ.20 ಕೋಟಿ ಮೂಲಸೌಕರ್ಯ ಬಳಸಿಕೊಂಡು, ರೂ.10 ಕೋಟಿ ಹೆಚ್ಚುವರಿ ಅನುದಾನ ಹಾಗೂ 10 ಬೋಧಕ ಸಿಬ್ಬಂದಿಯೊಂದಿಗೆ ಪದವಿ ಕಾಲೇಜು ಆರಂಭಿಸುವುದು.
- ಡಿಪ್ಲೋಮಾ ಕೋರ್ಸ್ ಸ್ಥಳಾಂತರ: ಬ್ರಹ್ಮಾವರದ ಕೃಷಿ ಡಿಪ್ಲೋಮಾ ಕೋರ್ಸ್‌ಗಳನ್ನು ದಾವಣಗೆರೆ ಜಿಲ್ಲೆಯ ಕತ್ತಲಗೆರೆ ವಿಶ್ವವಿದ್ಯಾಲಯದ ಆವರಣಕ್ಕೆ ಸ್ಥಳಾಂತರಿಸುವುದು.
- ರೂ.5,000 ಕೋಟಿ ವಿಶೇಷ ಪ್ಯಾಕೇಜ್: ಮೂಲಸೌಕರ್ಯ, ಮೀನುಗಾರಿಕೆ ಮತ್ತು ಪ್ರವಾಸೋದ್ಯಮಕ್ಕೆ ಆದ್ಯತೆ.
- ಕಡಲ್ಕೊರೆತಕ್ಕೆ ಶಾಶ್ವತ ಪರಿಹಾರ: ವೈಜ್ಞಾನಿಕ ಅಧ್ಯಯನದ ಆಧಾರದಲ್ಲಿ ಶಾಶ್ವತ ತಡೆಗೋಡೆ ಹಾಗೂ ಸಂರಕ್ಷಣಾ ಕಾಮಗಾರಿ.
- ಪ್ರತ್ಯೇಕ ಮೀನುಗಾರಿಕಾ ವಿಶ್ವವಿದ್ಯಾಲಯ: ಮಂಗಳೂರು ಮೀನುಗಾರಿಕಾ ಕಾಲೇಜನ್ನು ವಿಶ್ವವಿದ್ಯಾಲಯವಾಗಿ ಮೇಲ್ದರ್ಜೆಗೇರಿಸಿ ಮೀನುಗಾರಿಕೆ, ಜಲಕೃಷಿ, ಸಾಗರ ವಿಜ್ಞಾನ, ಸಂಸ್ಕರಣೆ ಹಾಗೂ ಮೌಲ್ಯವರ್ಧನೆ ಕ್ಷೇತ್ರಗಳಲ್ಲಿ ಉನ್ನತ ಶಿಕ್ಷಣ–ಸಂಶೋಧನೆಗೆ ಅವಕಾಶ.
- ಕರ್ನಾಟಕ ಮೀನುಗಾರಿಕಾ ಪರಿಷತ್ತು: ಮೀನುಗಾರಿಕೆ ಕ್ಷೇತ್ರದ ಅಭಿವೃದ್ಧಿ, ಮೀನುಗಾರರ ಸಮಸ್ಯೆ ಪರಿಹಾರ ಹಾಗೂ ಇಲಾಖೆಗಳ ಸಮನ್ವಯಕ್ಕಾಗಿ ಪ್ರತ್ಯೇಕ ಪರಿಷತ್ತು.
- ಮಂಗಳೂರಿನಲ್ಲಿ ಅಕ್ವಾಪಾರ್ಕ್: ಜಲಕೃಷಿ, ಮೀನು ಸಾಕಾಣಿಕೆ, ಶೀತಲ ಸರಪಳಿ ಮತ್ತು ಮೌಲ್ಯವರ್ಧಿತ ಉತ್ಪನ್ನಗಳಿಗೆ ಉತ್ತೇಜನ ನೀಡಿ ಉದ್ಯೋಗಾವಕಾಶ ಸೃಷ್ಟಿಸುವುದು.
- ಮೀನುಗಾರರ ಪರಿಹಾರ ಹೆಚ್ಚಳ: ಅಪಘಾತದಲ್ಲಿ ಮೃತಪಟ್ಟ ಮೀನುಗಾರರ ಕುಟುಂಬಕ್ಕೆ ನೀಡುವ ಪರಿಹಾರವನ್ನು ರೂ.5 ಲಕ್ಷದಿಂದ ರೂ.10 ಲಕ್ಷಕ್ಕೆ ಹೆಚ್ಚಿಸುವುದು.
- ಡೀಸೆಲ್ ಸಬ್ಸಿಡಿ ಹೆಚ್ಚಳ: ಮೀನುಗಾರಿಕಾ ದೋಣಿಗಳ ಇಂಧನ ವೆಚ್ಚದ ಹೊರೆ ತಗ್ಗಿಸಲು ಸಬ್ಸಿಡಿ ಹೆಚ್ಚಿಸುವುದು.
- ಕೋಲ್ಡ್ ಸ್ಟೋರೇಜ್: ಪ್ರಮುಖ ಮೀನುಗಾರಿಕಾ ಕೇಂದ್ರಗಳಲ್ಲಿ ಆಧುನಿಕ ಶೀತಲೀಕರಣ ಹಾಗೂ ಸಂಗ್ರಹ ಘಟಕ ಸ್ಥಾಪನೆ.
- ಕೌಶಲ್ಯಾಭಿವೃದ್ಧಿ ಕೇಂದ್ರ: 25 ಎಂಜಿನಿಯರಿಂಗ್, ಪಾಲಿಟೆಕ್ನಿಕ್, ಐಟಿಐ ಹಾಗೂ ಹೋಟೆಲ್ ಮ್ಯಾನೇಜ್‌ಮೆಂಟ್ ಕಾಲೇಜುಗಳ ಸುಮಾರು 50 ಸಾವಿರ ವಿದ್ಯಾರ್ಥಿಗಳಿಗೆ ಉದ್ಯೋಗಾಧಾರಿತ ತರಬೇತಿ.
- ಪಿಲಿಕುಳ ಜಮೀನು ಮಂಜೂರು: ಪ್ರಾಧಿಕಾರದ 356 ಎಕರೆ ಜಮೀನನ್ನು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಅಧಿಕೃತವಾಗಿ ಮಂಜೂರು ಮಾಡುವುದು.
- ಪಿಲಿಕುಳ ಪ್ರಾಧಿಕಾರ ಮಂಡಳಿಯಾಗಿ ಪರಿವರ್ತನೆ: ಪೂರ್ಣ ಪ್ರಮಾಣದ ಅಧ್ಯಕ್ಷರ ನೇಮಕದೊಂದಿಗೆ ಪರಿಸರ ಸಂರಕ್ಷಣೆ ಮತ್ತು ಪ್ರವಾಸೋದ್ಯಮಕ್ಕೆ ಆದ್ಯತೆ.
- ಅರ್ಬನ್ ಇಕೋ ಪಾರ್ಕ್: ಸ್ಥಗಿತಗೊಂಡಿರುವ ಯೋಜನೆ ಪೂರ್ಣಗೊಳಿಸಲು ಬಾಕಿ ರೂ.12.60 ಕೋಟಿ ಅನುದಾನ ಬಿಡುಗಡೆ.
- 'ಕರಾವಳಿ ಟೆಂಪಲ್ ಟೂರಿಸಂ' ಕಾರಿಡಾರ್: ಗೋಕರ್ಣ, ಮುರುಡೇಶ್ವರ, ಕೊಲ್ಲೂರು, ಉಡುಪಿ ಶ್ರೀಕೃಷ್ಣ ಮಠ, ಶೃಂಗೇರಿ, ಹೊರನಾಡು, ಕುಕ್ಕೆ ಸುಬ್ರಹ್ಮಣ್ಯ, ಧರ್ಮಸ್ಥಳ ಹಾಗೂ ಮಂಗಳಾದೇವಿ ದೇವಾಲಯಗಳನ್ನು ಸಂಪರ್ಕಿಸುವ ಧಾರ್ಮಿಕ ಪ್ರವಾಸೋದ್ಯಮ ಜಾಲ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 163,